ಸಂಪುಟ 01 | ಸಂಚಿಕೆ 190 | ಶುಕ್ರವಾರ 05 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಪರಿಸರ ದಿನ (World Environment Day) ಪ್ರತಿವರ್ಷ ಜೂನ್ 5ರಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಪರಿಸರ ಸಂರಕ್ಷಣೆ, ಅರಣ್ಯ ರಕ್ಷಣೆ, ಮಾಲಿನ್ಯ ನಿಯಂತ್ರಣ ಮತ್ತು ಹವಾಮಾನ ಬದಲಾವಣೆ ಬಗ್ಗೆ ಜಾಗೃತಿ ಮೂಡಿಸುವ ದಿನ. ಭಾರತದಲ್ಲಿ ಮರ ನೆಡುವ ಕಾರ್ಯಕ್ರಮಗಳು, ಸ್ವಚ್ಛತಾ ಅಭಿಯಾನಗಳು ಮತ್ತು ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ.

## ಸುಭಾಷಿತ

ನನ್ನಿಂದ ಇದು ಸಾಧ್ಯವಿಲ್ಲ ಎಂದುಕೊಳ್ಳಬೇಡಿ. ನಾನಿದನ್ನು ಮಾಡಬಲ್ಲೆ ಎಂಬ ಆತ್ಮವಿಶ್ವಾಸವೇ ನಿಮ್ಮನ್ನು ಮುನ್ನಡೆಸಬಲ್ಲದು.

–ಸ್ವಾಮಿ ವಿವೇಕಾನಂದ

## CWC ಸದಸ್ಯರಾಗಿ ಸಿದ್ದರಾಮಯ್ಯ ನೇಮಕ

ನೈಜ್ಯ ದೆಸೆ ನ್ಯೂಸ್



ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಅಫಅ) ಸದಸ್ಯರಾಗಿ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ನೇಮಕ ಮಾಡಿದೆ. CWC ಕಾಂಗ್ರೆಸ್ ಪಕ್ಷದ ಉನ್ನತ ಮಟ್ಟದ ಸಮಿತಿ. ಅತ್ಯುನ್ನತ ನಿರ್ಧಾರಗಳನ್ನು ತೆಗೆದುಕೊಳ್ಳುವ ಸಮಿತಿ ಇದಾಗಿದೆ. ದೇಶದ್ಯಾಂತ ಇರುವ ಪ್ರಮುಖ ನಾಯಕರನ್ನು ಈ ಸಮಿತಿಯಲ್ಲಿ ಸದಸ್ಯರಾಗಿಸಿದೆ. ಈ ಸಮಿತಿಯಲ್ಲಿ ಸಿದ್ದರಾಮಯ್ಯ ಅವರಿಗೆ ಅವಕಾಶ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಹರಿಪ್ರಸಾದ್ ಕೆಪಿಸಿಸಿ ಅಧ್ಯಕ್ಷ ಸ್ಥಾನ

# ರಾಜ್ಯದಲ್ಲಿ ಮತ್ತೊಂದು ಶಕ್ತಿ ಕೇಂದ್ರ ಸೃಷ್ಟಿ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಬಿ.ಕೆ.ಹರಿಪ್ರಸಾದ್ ಕಾಂಗ್ರೆಸ್ ಅಧ್ಯಕ್ಷರಾದ ಬಳಿಕ ರಾಜ್ಯದಲ್ಲಿ ಮತ್ತೊಂದು ಶಕ್ತಿಕೇಂದ್ರ ಸೃಷ್ಟಿಯಾದಂತಾಗಿದೆ. ಇಂದು ಬೆಳಗ್ಗೆಯಿಂದಲೂ ಕಾಂಗ್ರೆಸ್‌ನ ಸಚಿವರ ಶಾಸಕರ ದಂಡು, ಹರಿಪ್ರಸಾದ್ ಅವರ ಮನೆಗೆ ಭೇಟಿ ನೀಡಿ ಶುಭ ಹಾರೈಸುತ್ತಿದೆ.

ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಸಚಿವರಾದ ಕೃಷ್ಣಭೈರೇಗೌಡ, ಎಂ.ಬಿ.ಪಾಟೀಲ್, ಯು.ಟಿ.ಖಾದರ್, ಭೈರತಿ ಸುರೇಶ್, ಮಾಜಿ ಸಚಿವ ಸಂತೋಷ್ ಲಾಡ್ ಸೇರಿದಂತೆ ಹಲವಾರು ಮಂದಿ ಬಿ.ಕೆ.ಹರಿಪ್ರಸಾದ್ ಮನೆಗೆ ಭೇಟಿ ನೀಡಿದ್ದಾರೆ. ರಾಜ್ಯ ಕಾಂಗ್ರೆಸ್‌ನಲ್ಲಿ ಈಗಾಗಲೇ ಮೂರ್ನಾಲ್ಕು ಶಕ್ತಿಕೇಂದ್ರಗಳಿವೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿರುವವರೆಗೂ ಪಕ್ಷ



ಹಾಗೂ ಆಡಳಿತದ ಮೇಲೆ ಅವರ ಹಿಡಿತ ಪ್ರಬಲವಾಗಿತ್ತು. ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿರುವುದರಿಂದ ಮತ್ತೊಂದು ಶಕ್ತಿ ಕೇಂದ್ರ ಸಕ್ರಿಯವಾಗಿತ್ತು. ಈ ನಡುವೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಜ್ಯದವರೇ ಆಗಿರುವುದರಿಂದ ಅನಾಯಸವಾಗಿ ಮತ್ತೊಂದು ಶಕ್ತಿ ಕೇಂದ್ರ ಚಾಲ್ತಿಯಲ್ಲಿತ್ತು. ಬಿ.ಕೆ.ಹರಿಪ್ರಸಾದ್ ಕಾಂಗ್ರೆಸ್ ಹೈಕಮಾಂಡ್ ನಾಯಕರ ಆಪ್ತ ಬಳಗದಲ್ಲಿದ್ದರು. ಮತ್ತೊಂದು ಶಕ್ತಿಕೇಂದ್ರವಾಗಿ ಗುರುತಿಸಿಕೊಂಡಿರಲಿಲ್ಲ. ಒಂದು ಕಾಲದಲ್ಲಿ ಡಿ.ಕೆ.ಶಿವಕುಮಾರ್ ಅವರ ಆಪ್ತ ಮಿತ್ರರಾಗಿದ್ದರು. ರಾಜಕೀಯ ಬೆಳವಣಿಗೆಗಳಲ್ಲಿ ತೆರೆಮರೆಯಲ್ಲಿ ವಿರೋಧಿ ಗುಂಪಿನಲ್ಲಿ ಕಾಣಿಸಿಕೊಂಡಿದ್ದರು. ಆದರೆ ಇಬ್ಬರೂ ಮೂಲ ಕಾಂಗ್ರೆಸ್ಸಿಗರು ಮತ್ತು ಪಕ್ಷದ ನಿಷ್ಠಾವಂತ ಶಿಸ್ತಿನ ಶಿಪಾಯಿಗಳು ಎಂಬುದರಲ್ಲಿ ಎರಡು ಮಾತಿಲ್ಲ. ನಿನ್ನೆ ಅಧ್ಯಕ್ಷರಾಗಿ ನೇಮಕವಾಗಿರುವ ಬಿ.ಕೆ. ಹರಿಪ್ರಸಾದ್, ಇಂದು ಮಾಧ್ಯಮಗಳಿಗೆ ಹೇಳಿಕೆ ನೀಡಿ ಅಧಿಕಾರ ಬೇಕಾದವರು ಡಿ.ಕೆ.ಶಿವಕುಮಾರ್ ಬಳಿ ಹೋಗಲಿ, ಪಕ್ಷದ ಸಂಘಟನೆಯನ್ನು ಸದೃಢಗೊಳಿಸಬೇಕು ಎಂಬ ಆಸಕ್ತಿ ಹೊಂದಿರುವವರು ತಮೊಂದಿಗೆ ಬರಲಿ ಎಂದು ನೇರವಾಗಿ ಹೇಳಿದ್ದಾರೆ.


ಪಕ್ಷದ ಅಧ್ಯಕ್ಷ ಸ್ಥಾನ ಮಹತ್ವದ ಜವಾಬ್ದಾರಿಯಾಗಿದೆ. ನೂತನ ಅಧ್ಯಕ್ಷರನ್ನು ಭೇಟಿ ಮಾಡಲು ಸಾಲು ಸಾಲು ಮುಖಂಡರ ಹಿಂಡು ಹರಿಪ್ರಸಾದ್ ಅವರ ಮನೆಗೆ ಭೇಟಿ ನೀಡಿದರು.

## ಪ್ರಜೆಗಳ ಸಂತೋಷವೇ ನನ್ನ ಸಂತೋಷವೆಂದಿದ್ದ ಒಡೆಯರ ಜನ್ಮದಿನಾಚರಣೆ

ನೈಜ್ಯ ದೆಸೆ ನ್ಯೂಸ್

ಬಳಗಾನೂರಿನ ಪಟ್ಟಣ ಪಂಚಾಯ್ತಿ ಕಾರ್ಯಾಲಯದಲ್ಲಿ ಕರ್ನಾಟಕ ಕಂಡ ಅಪ್ರತಿಮ ಮೈಸೂರು ದೊರೆ, ನವ ಮೈಸೂರು ನಿರ್ಮಾಣದ ಶಿಲ್ಪಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮದಿನಾಚರಣೆಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯ್ತಿಯ ಮುಖ್ಯಾಧಿಕಾರಿಗಳು, ಸದಸ್ಯರುಗಳು, ಸಿಬ್ಬಂದಿವರ್ಗ, ಪಟ್ಟಣದ ಹಿರಿಯರು ಹಾಗೂ ನಾಗರಿಕರು ಭಾಗವಹಿಸಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು. ನಾಲ್ವಡಿ ಕೃಷ್ಣರಾಜ ಒಡೆಯರ್



ಅವರು ಆಧುನಿಕ ಕರ್ನಾಟಕದ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ ಮಹಾನ್ ದಾರ್ಶನಿಕ ಆಡಳಿತಗಾರರಾಗಿದ್ದರು. ಅವರ ಆಡಳಿತ ಅವಧಿಯಲ್ಲಿ ಕೃಷ್ಣರಾಜ ಸಾಗರ (KRS) ಅಣೆಕಟ್ಟು, ಶಿವನಸಮುದ್ರ ಜಲವಿದ್ಯುತ್ ಯೋಜನೆ,ಮೈಸೂರು ವಿಶ್ವವಿದ್ಯಾಲಯ, ಮೈಸೂರು ಬ್ಯಾಂಕ್,ಭದ್ರಾವತಿ ಉಕ್ಕಿನ ಕಾರ್ಖಾನೆ ಹಾಗೂ ಮೈಸೂರು ಸ್ಯಾಂಡಲ್ ಸೋಪ್ ಕಾರ್ಖಾನೆಗಳಂತಹ ಅನೇಕ ಅಭಿವೃದ್ಧಿ ಯೋಜನೆಗಳು ಜಾರಿಯಾಗಿದ್ದು, ರಾಜ್ಯದ ಪ್ರಗತಿಗೆ ಭದ್ರ ಬುನಾದಿ ಹಾಕಿದವು.

ಅಸ್ಪೃಶ್ಯತೆ ನಿವಾರಣೆ, ಬಾಲ್ಯ ವಿವಾಹ ನಿಷೇಧ ಹಾಗೂ ಬಾಲಕಿಯರ ಶಿಕ್ಷಣಕ್ಕೆ ಉತ್ತೇಜನ ನೀಡುವ ಮೂಲಕ ಸಾಮಾಜಿಕ ಕ್ರಾಂತಿಗೂ ಅವರು ಕಾರಣರಾದರು. 1905ರಲ್ಲೇ ಬೆಂಗಳೂರಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ ದೂರದೃಷ್ಟಿಯ ಆಡಳಿತಗಾರರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು "ಪ್ರಜೆಗಳ ಸಂತೋಷವೇ ನನ್ನ ಸಂತೋಷ" ಎಂಬ ಆದರ್ಶವನ್ನು ಜೀವನಪೂರ್ತಿ ಪಾಲಿಸಿಕೊಂಡು ಬಂದಿದ್ದರು.

ಇಂದಿನ ಕರ್ನಾಟಕದ ಅಭಿವೃದ್ಧಿ ಮತ್ತು ಪ್ರಗತಿಗೆ ಅವರ ದೂರದೃಷ್ಟಿಯ ಆಡಳಿತವೇ ಪ್ರಮುಖ ಕಾರಣವೆಂದು ಕಾರ್ಯಕ್ರಮದಲ್ಲಿ ಮಾತನಾಡಿದವರು ಅಭಿಪ್ರಾಯಪಟ್ಟರು.

## ಕೋಳಿ ಫಾರಂನಲ್ಲಿ ಸ್ವಚ್ಛತೆ ಇಟ್ಟುಕೊಳ್ಳಬೇಕು ತಹಸೀಲ್ದಾರ ಗುರುರಾಜ ಛಲವಾದಿ ತಾಕೀತು

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ತಾಲೂಕಿನ ಗುಡಿಕಲಕೇರಿಯ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಮಾಣೀಕ್ಯಂ ಪೌಲ್ಟಿ ಫಾರಂಗೆ ತಹಸೀಲ್ದಾರ ಗುರುರಾಜ ಛಲವಾದಿ ನೇತೃತ್ವದ ಟಾಸ್ಕ್ ಫೋರ್ಸ್ ಸಮಿತಿಯವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಟಾಸ್ ಫೋರ್ಸ್ ಸಮಿತಿಯ ಪರಿಶೀಲನೆ ವೇಳೆ ಕೋಳಿ ಫಾರಂ ಸ್ವಚ್ಛತೆ, ತ್ಯಾಜ್ಯ ವಿಲೇವಾರಿ ಹಾಗೂ ನೊಣ ನಿಯಂತ್ರಣ ಕ್ರಮಗಳ ಬಗ್ಗೆ ಮಾಹಿತಿ ಪಡೆದುಕೊಂಡ ಅಧಿಕಾರಿಗಳು, ನೊಣಗಳ ಹಾವಳಿ ಹಾಗೂ ದುರ್ವಾಸನೆಯಿಂದ ಫಾರಂ ಸುತ್ತಮುತ್ತಲಿನ ಗ್ರಾಮಸ್ಥರಿಗೆ ತೊಂದರೆಯಾಗದಂತೆ ತಕ್ಷಣ ಅಗತ್ಯ ಕ್ರಮ ಕೈಗೊಳ್ಳುವಂತೆ ಮಾಲೀಕರಿಗೆ ಸೂಚನೆ ನೀಡಿದರು. ಕಡೆಕೊಪ್ಪ ಗ್ರಾಮಕ್ಕೆ ತಂಡ ಭೇಟಿ ಈ ತಹಸೀಲ್ದಾರ ಗುರುರಾಜ ಛಲವಾದಿ ನೇತೃತ್ವದ ಟಾಸ್ಕ್‌ಫೋರ್ಸ್‌ಮಿತಿಯವರು ಕಡೇಕೊಪ್ಪ ಗ್ರಾಮಕ್ಕೆ ಭೇಟಿ ನೀಡಿದ ಕಡೇಕೊಪ್ಪ



ಗ್ರಾಮಸ್ಥರಿಂದ ಕೋಳಿ ಫಾರಂನಿಂದಾಗುವ ತೊಂದರೆಗಳ ಕುರಿತು ಸಮಗ್ರ ಮಾಹಿತಿ ಪಡೆದುಕೊಂಡ ಅವರು ತೊಂದರೆಯುಂಟಾದಲ್ಲಿ ಅಧಿಕಾರಿಗಳ ಗಮನಕ್ಕೆ ತರುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ. ಆನಂದ ಗೋಟೂರು, ಸಿಪಿಐ ವಿಶ್ವನಾಥ ಹಿರೇಗೌಡ್ರ, ಪಶು ಸಂಗೋಪನಾ ಸಹಾಯಕ ನಿರ್ದೇಶಕ ಡಾ. ಅನಂದ ದೇವರನಾವದಗಿ, ಕಂದಾಯ ಇಲಾಖೆ ನೀರಿಕ್ಷಕ ಅಬ್ದುಲ್ ರಜಾಕ ಮದಲಗಟ್ಟಿ, ಗ್ರಾಮ ಆಡಳಿತಾಧಿಕಾರಿಮೌನೇಶ ಮಡಿವಾಳರ, ಕೇಸೂರು ಗ್ರಾಪಂ ಪಿಡಿಒ ಕೆ.ವಾಗೀಶ, ಆಹಾರ ನೀರಿಕ್ಷಕ ರಮೇಶ ತಾಳಕೇರಿ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರಾದ ಮಲಕಾಜಗೌಡ ಪಾಟೀಲ್ ವೀರೇಶ ನಿಡಗುಂದಿಮಠ ಕೋಳಿ ಫಾರಂ ಮಾಲೀಕರಾದ ರಾಮ್ ಮೋಹನ್ ಸೇರಿದಂತೆ ಅನೇಕರು ಇದ್ದರು.

## ಸರಕಾರಿ ಕಾಲೇಜಿನಲ್ಲಿ ಶಿಕ್ಷಣ,ಕನಸುಗಳಿಗೆ ಬಲವಾದ ಅಡಿಪಾಯ" ವಿದ್ಯಾರ್ಥಿಗಳಿಗೆ ಪ್ರಾಚಾರ್ಯ ರಂಗಯ್ಯ ಶ್ರೇಷ್ಠಿ ಕರೆ.

ನೈಜ್ಯ ದೆಸೆ ನ್ಯೂಸ್

ಬಳಗಾನೂರಿನಲ್ಲಿ ನೂತನವಾಗಿ ಆರಂಭಗೊಂಡಿರುವ ಸರಕಾರಿ ಪದವಿಪೂರ್ವ ಕಾಲೇಜಿಗೆ ಪ್ರಸ್ತುತ ಶೈಕ್ಷಣಿಕ ಸಾಲಿನ ಪ್ರವೇಶ ಪ್ರಕ್ರಿಯೆ ಆರಂಭವಾಗಿದ್ದು, ವಿದ್ಯಾರ್ಥಿಗಳು ಈ ಸುವರ್ಣಾವಕಾಶವನ್ನು ಸದ್ಬಳಕೆ ಮಾಡಿಕೊಂಡು ಬೇಗನೆ ಪ್ರವೇಶ ಪಡೆಯಬೇಕೆಂದು ಕಾಲೇಜಿನ ಪ್ರಾಚಾರ್ಯ ರಂಗಯ್ಯ ಶ್ರೇಷ್ಠಿ ಕರೆ ನೀಡಿದ್ದಾರೆ.ಈ ಕುರಿತು ಮಾತನಾಡಿದ ಅವರು, "ಸರಕಾರಿ ಕಾಲೇಜಿನಲ್ಲಿ ಗುಣಮಟ್ಟದ ಶಿಕ್ಷಣದೊಂದಿಗೆ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಅನೇಕ ಸೌಲಭ್ಯಗಳು ಲಭ್ಯವಿವೆ. ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ತಮ್ಮ ಕನಸುಗಳನ್ನು ನನಸು ಮಾಡಿಕೊಂಡು, ಸಮಾಜ ಹಾಗೂ ದೇಶಕ್ಕೆ ಅಮೂಲ್ಯವಾದ ಕೊಡುಗೆ ನೀಡುವ ಸಾಧಕರಾಗಬೇಕು" ಎಂದು ಕೈಕೊಟ್ಟಿದ್ದಾರೆ.




ಕಾಲೇಜಿನಲ್ಲಿ ಡಿಜಿಟಲ್ ಬೋರ್ಡ್ ಮೂಲಕ ಆಧುನಿಕ ಪಾಠ ಪ್ರವಚನ ವ್ಯವಸ್ಥೆ, ಅನುಭವೀ ಉಪನ್ಯಾಸಕರಿಂದ ಗುಣಮಟ್ಟದ ಬೋಧನೆ, ಗಣಕ ವಿಜ್ಞಾನವನ್ನು ಒಳಗೊಂಡ ವಾಣಿಜ್ಯ ಶಾಸ್ತ್ರ ವಿಭಾಗ, ಹಾಗೂ ಸರಕಾರದಿಂದ ಉಚಿತ ಪಠ್ಯಪುಸ್ತಕಗಳ ವಿತರಣೆ ಸೇರಿದಂತೆ ಹಲವು ವಿಶೇಷ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದು ತಿಳಿಸಿದರು.ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣಕ್ಕಾಗಿ ದೂರದ ಊರುಗಳಿಗೆ ತೆರಳುವ ಅಗತ್ಯವಿಲ್ಲ. ತಮ್ಮ ಊರಿನಲ್ಲಿಯೇ ಉತ್ತಮ ಶೈಕ್ಷಣಿಕ ವಾತಾವರಣವನ್ನು ಬಳಸಿಕೊಂಡು ಉನ್ನತ ಭವಿಷ್ಯ ನಿರ್ಮಿಸಿಕೊಳ್ಳಬಹುದು ಎಂದು ಅವರು ಹೇಳಿದರು.ಆಸಕ್ತ ವಿದ್ಯಾರ್ಥಿಗಳು ಹಾಗೂ ಪೋಷಕರು ತಕ್ಷಣವೇ ಕಾಲೇಜಿಗೆ ಭೇಟಿ ನೀಡಿ ಪ್ರವೇಶ ಪಡೆದು, ಸರಕಾರದ ಶಿಕ್ಷಣ ಸೌಲಭ್ಯಗಳ ಪ್ರಯೋಜನ ಪಡೆಯಬೇಕೆಂದು ಪ್ರಾಚಾರ್ಯರು ಮನವಿ ಮಾಡಿದ್ದಾರೆ.

# ಮೂಗು ಸುರೇಶರ 'ಕ್ಷಮೆಯಿರಲಿ ತಂದೆ' ಜೂನ್ 12 ಕ್ಕೆ ಬಿಡುಗಡೆ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಶ್ರೀದೇವಿರಮ್ಮ ಮಲ್ಲಿಕಾರ್ಜುನ ಸ್ವಾಮಿ ಫಿಲಂಸ್ ಅವರ ಶ್ರೀಮತಿ ಅಹಲ್ಯಾ ಸುರೇಶ ಅರ್ಪಿಸುವ ಸ.ಹರೀಶ್‌ರ ಕಥೆ 'ಡೆತ್ ಸರ್ಟಿಫಿಕೆಟ್' ಆಧಾರಿತ 'ಕ್ಷಮೆಯಿರಲಿ ತಂದೆ' ಇದೆ ಜೂನ್ 12 ಕ್ಕೆ ರಾಜ್ಯಾದ್ಯಂತ ತೆರೆ ಕಾಣಲಿದೆ. ರಂಗಭೂಮಿ, ಕಿರುತೆರೆ, ಹಿರಿತೆರೆ ಕಲಾವಿದರಾಗಿ ಹಾಸ್ಯ ಕಲಾವಿದರಾಗಿ ಮೂರು ದಶಕಗಳಿಂದ 400ಕ್ಕೂ ಅಧಿಕ ಚಿತ್ರಗಳಲ್ಲಿ ನಟಿಸಿರುವ ಎಂ.ಎನ್.ಸುರೇಶ್ (ಮೂಗು ಸುರೇಶ್) ಈಗ ನಿರ್ಮಾಪಕ, ನಿರ್ದೇಶಕರಾಗಿ 'ಕ್ಷಮೆಯಿರಲಿ ತಂದೆ' ಚಿತ್ರ ನಿರ್ಮಿಸಿದ್ದು,

ಈ ಚಿತ್ರದ ಮೋಷನ್ ಪೋಸ್ಟರ್, ಟ್ರೇಲರ್ ಹಾಗೂ ಲಿರಿಕಲ್ ವಿಡಿಯೋ ಬಿಡುಗಡೆ ಸಮಾರಂಭ ಬೆಂಗಳೂರಲ್ಲಿ ಜರುಗಿತು. ಕನ್ನಡ ಚಿತ್ರರಂಗದ ಹೆಸರಾಂತ ನಿರ್ದೇಶಕರಾದ ಟಿ.ಎಸ್ ನಾಗಾಭರಣ,




ನಾಗತಿಹಳ್ಳಿ ಚಂದ್ರಶೇಖರ್, ನಿರ್ಮಾಪಕ ಉಮೇಶ್ ಬಣಕಾರ್ ಹಾಗೂ ರಾಮಕೃಷ್ಣ (ಮೇಕಪ್)ಮುಖ್ಯ ಅತಿಥಿಗಳಾಗಿ ಆಗಮಿಸಿ ಬಿಡುಗಡೆ ಮಾಡಿ, ಚಿತ್ರದ ಟ್ರೇಲರ್ ಚೆನ್ನಾಗಿದೆ. ಚಿತ್ರ ಯಶಸ್ವಿಯಾಗಲಿ, ಎಂ ಎನ್ ಸುರೇಶ್ ನಿರ್ಮಾಪಕ ಹಾಗೂ ನಿರ್ದೇಶಕರಾಗಿಯೂ ಗೆಲ್ಲಲಿ ಎಂದು ಶುಭ ಹಾರೈಸಿದರು. ಚಿತ್ರದ ಕುರಿತು ನಿರ್ಮಾಪಕ ಹಾಗೂ ನಿರ್ದೇಶಕ ಎನ್, ಎಂ.ಸುರೇಶ್ ಮಾತನಾಡಿ ನಾನು ಕೆಲವು ಚಿತ್ರಗಳಿಗೂ ಸಹ ನಿರ್ಮಾಪಕನಾಗಿದ್ದೆ.

ಪೂರ್ಣಪ್ರಮಾಣದ ನಿರ್ಮಾಪಕನಾಗಿರುವುದು ಈ ಚಿತ್ರದಿಂದ. ನಿರ್ದೇಶನ ನಾನು ಮಾಡಬೇಕೆಂದುಕೊಂಡಿರಲಿಲ್ಲ, ನನ್ನ ಕಾರ್ಯವೈಖರಿ ಹತ್ತಿರದಿಂದ ಬಲ್ಲ ಸ್ನೇಹಿತರು ನೀವೇ ನಿರ್ದೇಶನ ಮಾಡಿ ಎಂದರು. ಮೊದಲ ನಿರ್ದೇಶನದ ಚಿತ್ರ, ಬೇರೆಯವರು ದುಡ್ಡು ಹಾಕುವುದು ಬೇಡ ಅಂತ ನಾನು ಕೂಡಿಟ್ಟಿದ್ದ ಹಣವನ್ನೇ ಈ ಚಿತ್ರಕ್ಕೆ ಹಾಕಿ ನಿರ್ಮಾಣ ಮಾಡಿದ್ದೇನೆ. ಬೆಂಗಳೂರು, ತುಮಕೂರು ಮೊದಲಾದ ಕಡೆ ಹತ್ತು ದಿನಗಳ ಕಾಲ ಚಿತ್ರೀಕರಣ ಮಾಡಿದ್ದೇವೆ. ಶೀರ್ಷಿಕೆ ತಿಳಿಸುವಂತೆ ಇದೊಂದು ತಂದೆ-ಮಗನ ಬಾಂಧವ್ಯ ಸಾರುವ ಚಿತ್ರ. ಈ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು.

ತಾರಾಗಣದಲ್ಲಿ ಮೂಗು ಸುರೇಶ್ ಜೊತೆಗೆ ಮಂಜುನಾಥ ಹೆಗ್ಡೆ, ರೇಣುಕಾ ಬಾಲಿ, ಶ್ರೀಮಂತ, ವಿನ್ಯಾ ಶೆಟ್ಟಿ ಮೊದಲಾದವರಿದ್ದಾರೆ. ತಾಂತ್ರಿಕವರ್ಗದಲ್ಲಿ ಛಾಯಾಗ್ರಹಣ ಸೂರ್ಯಕಾಂತ, ಸಂಕಲನ ಮುತ್ತುರಾಜ್, ಸಂಗೀತ ಪುಣ್ಯಶ್ ಕುಮಾರ್, ಪಿಆರ್ ಓ ಸುಧೀಂದ್ರಕುಮಾರ್, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿಯವರಿದ್ದಾರೆ. ಚಿತ್ರವನ್ನು ಶ್ರೀ ದೇವಿರಮ್ಮ ಮಲ್ಲಿಕಾರ್ಜುನಸ್ವಾಮಿ ಫಿಲಂಸ್, ರಾಘವೇಂದ್ರ ಫಿಲಂಸ್,ಕವಿ ಎಂಟರ್ಪ್ರೈಸಸ್ ಹಂಚಿಕೆದಾರರಾಗಿದ್ದಾರೆ.

-ಡಾ.ಪ್ರಭು ಗಂಜಿಹಾಳ

## ಸಾಹಿತ್ಯ ಸಿಂಚನ

### ನಗು

ನಗು ಎಂದರೆ ದೇವರ ವರ,
ಮನದ ನೋವಿಗೆ ಮಧುರ ಔಷಧಿಯ ಸರ.
ಒಂದು ನಗುವಿನಲ್ಲಿ ಪ್ರೀತಿ ಮಾತು,
ಜೀವನ ಸಾಗಿಸುವ ಸಿಹಿ ದಾರಿ ತಾತ್ಪರ್ಯವು.

ಮುಗುಳ್ನಗೆ ಮೂಡಿದ ಮುಖದಲ್ಲಿ,
ಚಂದ್ರನ ಹೊಳಪು ಕಾಣುತ್ತದೆ ಕಣ್ಣಿನಲ್ಲಿ.
ಕೋಪದ ಮೋಡ ಕಣ್ಮರೆಯಾಗುತ್ತದೆ,
ನಗುವಿನ ಸೂರ್ಯ ಉದಯವಾಗುತ್ತದೆ.

ಬಡವನಿಗೂ ನಗು ಆಸ್ತಿ,
ಧನವಂತರಿಗೂ ಅದೇ ಶಕ್ತಿ.
ಹಣದಿಂದ ಸಿಗದ ಸಂತೋಷ,
ನಗುವಿನಲ್ಲಿ ದೊರೆಯುವ ಅಮೂಲ್ಯ ಹರ್ಷ.


ನಗುತಿರೋ ಮನಸು ಹೂವಿನಂತೆ,
ಸ್ನೇಹ ಬೆಳೆಸುವ ಮಳೆಯಂತೆ.
ಒಂದು ನಗು ಕೊಡು ಜಗತ್ತಿಗೆ,
ಪ್ರೀತಿ ಮರಳಿ ಬರುತ್ತದೆ ಹೃದಯಕ್ಕೆ.

ಕುಮಾರ್ ನಾಯಕ

## ಜಿ.ಎಂ.ಪವಿತ್ರಾಗೆ ಪ್ರತಿಭಾ ಪುರಸ್ಕಾರದ ಗೌರವ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿಕಂಪ್ಲಿ : ಚಿಕ್ಕಬಳ್ಳಾಪುರ ನಗರದ ಕನ್ನಡ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನೇತೃತ್ವದಲ್ಲಿ ನಡೆದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಕಂಪ್ಲಿಯ ಎಮ್ಮಿಗನೂರಿನ ಹಿರಿಯ ಪತ್ರಕರ್ತರಾದ ಜಿ.ಎಂ.ಬಸಯ್ಯಸ್ವಾಮಿ ಪುಷ್ಪಾವತಿ ದಂಪತಿಯ ಸುಪುತ್ರಿ ಜಿ.ಎಂ.ಪವಿತ್ರ ಇವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.



ಇಲ್ಲಿನ ಕಾರ್ಯಕ್ರಮದಲ್ಲಿ ದ್ವಿತೀಯ ಪಿಯುಸಿಯಲ್ಲಿ 581(ಶೇ.96.83%) ಅಂಕಗಳನ್ನು ಪಡೆದ ಹಿನ್ನಲೆ ಪತ್ರಕರ್ತರ ಸಂಘದಿಂದ ಪ್ರತಿಭಾ ಪುರಸ್ಕಾರವನ್ನು ಗೌರವಿತವಾಗಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್,

## ಇಂದು ವಿಶ್ವ ಪರಿಸರ ದಿನ :ವಿವಿಧ ಕಾರ್ಯಕ್ರಮಗಳು

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜಮಾತೆ ಇಸ್ಲಾಮಿ ಹಿಂದ್ ರಾಜ್ಯ ಘಟಕದ ವತಿಯಿಂದ ರಾಜ್ಯಾದ್ಯಂತ ಸಾರ್ವಜನಿಕರಲ್ಲಿ ಪರಿಸರ ಜಾಗೃತಿಯನ್ನು ಮೂಡಿಸಲು ಅಭಿಯಾನವನ್ನು ಹಮ್ಮಿಕೊಂಡಿದ್ದು ಇದರ ಅಂಗವಾಗಿ ಇಂದು(ಜೂನ್.5) ಜಮಾತೆ ಇಸ್ಲಾಮಿ ಹಿಂದ್ ಸ್ಥಳೀಯ ಶಾಖೆ ಹಾಗೂ ಹಸಿರು ಸಂಪದ ಬಳಗದ ಸಹಯೋಗದಲ್ಲಿ ಹಲವು ಕಾರ್ಯಕ್ರಮಗಳು ಜರುಗಲಿವೆ. ಮುಂಜಾನೆ 7-00 ಘಂಟೆಗೆ ಪಟ್ಟಣದ ಹುಣಸಗಿ ರಸ್ತೆಯಲ್ಲಿರುವ ಈದ್ಗಾ ಮೈದಾನದಲ್ಲಿ ಸಸಿ ನೆಡುವ ಮೂಲಕ ಈ ಅಭಿಯಾನಕ್ಕೆ ಚಾಲನೆ ನೀಡಲಾಗುವುದು.




ಇಂದು ಶುಕ್ರವಾರ ಆಗಿರುವುದರಿಂದ ಪಟ್ಟಣದ ಪ್ರಮುಖ ಮಸೀದಿಗಳಲ್ಲಿ ಪರಿಸರ ಪ್ರಜ್ಞೆ ಹಾಗೂ ಸಂರಕ್ಷಣೆ ಕುರಿತು ವಿಶೇಷ ಉಪನ್ಯಾಸಗಳನ್ನು ನೀಡಲಾಗುವುದು. ಮಧ್ಯಾಹ್ನ 2-00 ಘಂಟೆಗೆ ಪಟ್ಟಣದ ಕತ್ರಿ ಬಜಾರ್ ಹತ್ತಿರ ಇರುವ ಜಾಮಿಯಾ ಮಸೀದಿಯಿಂದ ತಹಸಿಲ್ದಾರ ಕಾರ್ಯಾಲಯದ ಮೈದಾನದವರೆಗೆ ಸಾರ್ವಜನಿಕರಲ್ಲಿ ಪರಿಸರ ಪ್ರಜ್ಞೆಯನ್ನು ಜಾಗೃತಿಗೊಳಿಸಲು "ಪರಿಸರ ಜಾಗೃತಿ ಜಾಥಾ" ನಡೆಯುವುದು ಇದರಲ್ಲಿ ನೂರಾರು ಜನ ಪರಿಸರ ಪ್ರೇಮಿಗಳು ಸ್ವಯಂ ಪ್ರೇರಣೆಯಿಂದ ಭಾಗವಹಿಸುವರು. ಜಾಥಾದ ಅಂತ್ಯದಲ್ಲಿ ಸಾರ್ವಜನಿಕರಿಗೆ ಸಸಿಗಳನ್ನು ವಿತರಿಸಲಾಗುವುದು. ಇಂದು ಪಟ್ಟಣದಲ್ಲಿ ನಡೆಯುವ ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಜಮಾತೆ ಇಸ್ಲಾಮಿ ಹಿಂದ್ ನಗರ ಶಾಖೆಯ

## ಪ್ರತಿಭೆಗಳಿಗೆ ಬಿಜೆಪಿ ಯುವ ಮೋರ್ಚಾದಿಂದ ಸನ್ಮಾನ,ಉತ್ತಮ ಸಾಧನೆಯೇ ಉಜ್ವಲ ಭವಿಷ್ಯದ ದಾರಿ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ಭಾರತೀಯ ಜನತಾ ಪಾರ್ಟಿ ಯುವ ಮೋರ್ಚಾ ಮಸ್ಕಿ ಮಂಡಲದ ವತಿಯಿಂದ ಗುರುವಾರ ಮಧ್ಯಾಹ್ನ ಪಕ್ಷದ ಕಾರ್ಯಾಲಯದಲ್ಲಿ ಹತ್ತನೇ ತರಗತಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 90 ಪ್ರತಿಶತಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ಮಾತನಾಡಿ, "ಈ ಪ್ರತಿಭಾ ಪುರಸ್ಕಾರದ ಉದ್ದೇಶ ನಿಮ್ಮ ಸಾಧನೆಗೆ ಗೌರವ ನೀಡುವುದಷ್ಟೇ ಅಲ್ಲ, ನಿಮ್ಮನ್ನು ನೋಡಿ ಇನ್ನಷ್ಟು ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಗಳಿಸಲು ಪ್ರೇರೇಪಿತರಾಗಬೇಕು ಎಂಬುದಾಗಿದೆ" ಎಂದು ಹೇಳಿದರು.




371(ಜೆ) ಮೀಸಲಾತಿಯಿಂದ ಈ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶಗಳು ದೊರೆಯಲಿದ್ದು, ವಿದ್ಯಾರ್ಥಿಗಳು ಇದನ್ನು ಸದುಪಯೋಗಪಡಿಸಿಕೊಂಡು ಇನ್ನಷ್ಟು ಸಾಧನೆ ಮಾಡಿ ಉತ್ತಮ ನಾಗರಿಕರಾಗಬೇಕು ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಸ್ಕಿ ಮಂಡಲ ಅಧ್ಯಕ್ಷ ಶರಣಯ್ಯಸ್ವಾಮಿ ಸೊಪ್ಪಿಮಠ ವಹಿಸಿಕೊಂಡಿದ್ದರು. ಕಾರ್ಯಕ್ರಮದಲ್ಲಿ ಮಸ್ಕಿ ಮಂಡಲ ಯುವ ಮೋರ್ಚಾ ಅಧ್ಯಕ್ಷ ಚನ್ನಬಸವ ದೇಸಾಯಿ, ಪುರಸಭೆ ಅಧ್ಯಕ್ಷ ಸುರೇಶ್ ಅರಸೂರು ಸೇರಿದಂತೆ ಪಕ್ಷದ ಅನೇಕ ಮುಖಂಡರು ಉಪಸ್ಥಿತರಿದ್ದರು.ಪಕ್ಷದ ಮುಖಂಡರಾದ ಸಿದ್ದಣ್ಣ ಹೂವಿನಬಾವಿ, ಡಾ. ಬಿ.ಹೆಚ್. ದಿವಟರ್, ಪಂಪಣ್ಣ ಗುಂಡಳ್ಳಿ, ಶಿವಪುತ್ರಪ್ಪ ಹರಳಹಳ್ಳಿ, ಸೂಗಣ್ಣ ಬಾಳೆಕಾಯಿ, ಶಿವಕುಮಾರ್ ವಟಗಲ್, ಮಲ್ಲಿಕಾರ್ಜುನ್ ಬ್ಯಾಳಿ, ಮೌನೇಶ ನಾಯಕ, ರಮೇಶ್ ಉದ್ಬಾಳ್, ಬಸವರಾಜ್ ಗುಡಿಹಾಳ್, ಅಂಬರೀಶ್ ಗಚ್ಚಿನಮನಿ, ಆದನಗೌಡ ವಟಗಲ್, ಡಾ. ವೆಂಕಟೇಶ್ ಕೋಳಬಾಳ, ಶರಣೇಗೌಡ ಉಮಲೂಟಿ, ರಮೇಶ್ ನಾಯಕ, ಬಸವರಾಜ್ ಉದ್ಬಾಳ್, ನಿವೇದಿತಾ ಬುಳ್ಳ, ಅನ್ವರ್ ಗೋನಾಳ, ಗಂಗಾಧರ್ ಕಂಬಾಳಿಮಠ, ನಾಗರಾಜ್ ಪವಾರ್, ಮಲ್ಲಿಕಾರ್ಜುನ್ ಗೋನಾಳ, ಅಕ್ಕಮಹಾದೇವಿ ಅಡವಿಬಾವಿ ತಾಂಡ ಹಾಗೂ ನಾಗರತ್ನ ಸಂತೆಕೆಲ್ಲೂರು ಸೇರಿದಂತೆ ಹಲವರು ಭಾಗವಹಿಸಿದ್ದರು.

ಮಸ್ಕಿಕ್ಷೇತ್ರದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿ ವಿದ್ಯಾರ್ಥಿನಿಯರು, ಅವರ ಪಾಲಕರು, ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಮೆರುಗು ತಂದರು.

## ಇಂದೇ ತಂಬಾಕು ತ್ಯಜಿಸಿ ನಾಳೆಯ ಆರೋಗ್ಯವನ್ನು ಉಳಿಸಿ :ಬಾಲಪ್ಪ ನಾಯಕ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು



ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಜಿಲ್ಲಾ ಆಡಳಿತ ಮತ್ತು ಜಿಲ್ಲಾ ಆರೋಗ್ಯ ಇಲಾಖೆ . ಜಿಲ್ಲಾ ತಂಬಾಕು ನಿಯಂತ್ರಣ ಕೋಶ ವಿಭಾಗ ರಾಯಚೂರು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಸೂರ್ಯನಾರಾಯಣ ರೆಡ್ಡಿ ಕ್ಯಾಂಪ್ ನಲ್ಲಿ ತಂಬಾಕು ನಿಯಂತ್ರಣಕ್ಕಾಗಿ ಜಾಗೃತಿ ಮೂಡಿಸುವ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಂತರ ಕಾರ್ಯಕ್ರಮ ಕುರಿತು ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಯುವ ಜನತೆಯನ್ನು ದುಶ್ಚಟಗಳಿಂದ ರಕ್ಷಿಸುವುದು ಹಾಗೂ ಸಾರ್ವಜನಿಕರಿಗೆ ತಂಬಾಕಿನ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಶಾಲಾ ಕಾಲೇಜು ಆವರಣದ ನೂರು ಅಡಿ ವ್ಯಕ್ತಿಗಳಿಗೆ ತಂಬಾಕು ಮುಕ್ತ ಶಾಲೆಗಳನ್ನಾಗಿ ಮಾಡಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಉದ್ದೇಶ ಹೊಂದಲಾಗಿದೆ. ಸ್ವಸ್ಥ ಸಮಾಜ ನಿರ್ಮಾಣಕ್ಕಾಗಿ ಬೀದಿ ನಾಟಕ ಮತ್ತು ಜಾಥಾ ಮಾಡುವುದರ ಮೂಲಕ ಅರಿವು ಮೂಡಿಸಲಾಗುತ್ತದೆ. ವ್ಯಸನ ಮುಕ್ತ ಜೀವನಕ್ಕೆ ಹೆಚ್ಚಾಗಿ ಒತ್ತು ಕೊಡಲಾಗುತ್ತದೆ. ಇಂದಿನ ದಿನಗಳಲ್ಲಿ ಯುವ ಜನಾಂಗ ಹೆಚ್ಚಾಗಿ ತಂಬಾಕುಗಳ ಚಟಗಳಿಗೆ ಬಲಿಯಾಗುತ್ತಿದ್ದಾರೆ ಎಂದರು.

ನಂತರ ಮಾತನಾಡಿದ ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ ಅವರು ತಂಬಾಕು ಜೀವನ ಹಾಳು ಮಾಡುತ್ತದೆ ಸಾರ್ವಜನಿಕ ಸ್ಥಳಗಳಲ್ಲಿ ಮದ್ಯಪಾನ ಮತ್ತು ಧೂಮಪಾನ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಕೊಪ್ಟಾ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ಒತ್ತು ನೀಡಲಾಗುತ್ತದೆ. ಬಲಿಯಾಗದವರಿಗೆ ಚಿಕಿತ್ಸೆ ಮತ್ತು ಆಪ್ತ ಸಮಾಲೋಚನೆ ನೀಡಲಾಗುತ್ತದೆ.

ತಂಬಾಕು ಮುಕ್ತ ಸಮಾಜದಿಂದ ಉತ್ತಮ ಸಮಾಜ ನಿರ್ಮಾಣ ಮಾಡಬಹುದಾಗಿದೆ ನಮ್ಮ ಆರೋಗ್ಯ ನಮ್ಮ ಕುಟುಂಬ ಹಾಗೂ ಸಮಾಜದ ಉಜ್ವಲ ಭವಿಷ್ಯಕ್ಕಾಗಿ ತಂಬಾಕಿಗೆ ಸಂಪೂರ್ಣ ವಿದಾಯ ಹೇಳೋಣ. ಇಂದೇ ತಂಬಾಕು ತ್ಯಜಿಸಿ ನಾಳೆಯ ಆರೋಗ್ಯವನ್ನು ಉಳಿಸಿ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಾರ್ವಜನಿಕರು.ತಾಯಂದಿರು ಆಶಾ ಕಾರ್ಯಕರ್ತರಾದ ಮಾಲಾಶ್ರೀ ಅಂಗನವಾಡಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ನೊಂದ ಕರುಳಿಗೆ ಪ್ರೀತಿ ಎನ್ನುವ ಔಷಧವನ್ನಚ್ಚುತ್ತಿರುವ ಕರುಣೆಯ ಕಾರುಣ್ಯಾಶ್ರಮ-ಪ್ರಕಾಶ ಡಂಬಳ ಪಿ.ಎಸ್.ಐ.ಗಳು

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಪಿ.ಎಸ್.ಐ.ಗಳಾದ ಪ್ರಕಾಶ ಡಂಬಳ ಅವರು ಸಿಂಧನೂರು ನಗರದ ಕಾರುಣ್ಯಾಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವಸ್ವಾಮಿ ಹಿರೇಮಠ ಅವರೊಂದಿಗೆ ಆಶ್ರಮದ ನಿರ್ವಹಣೆಯನ್ನು ಕುರಿತು ವಿವರವಾಗಿ ಚರ್ಚಿಸಿ ಆಶ್ರಮಕ್ಕೆ ಸಹಾಯ ಸಹಕಾರ ಮಾಡುವ ಮೂಲಕ ಪ್ರೋತ್ಸಾಹಿಸಿದರು.

ಈ ಸಂದರ್ಭದಲ್ಲಿ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಪಿ.ಎಸ್.



ಐ.ಗಳಾದ ಪ್ರಕಾಶ ಡಂಬಳ ಅವರು ನೊಂದ ಕರುಳಿಗೆ ಪ್ರೀತಿ ಎನ್ನುವ ಔಷಧವನ್ನಚ್ಚುತ್ತಿರುವ ಕರುಣೆಯ ಕಾರುಣ್ಯಾಶ್ರಮ ನಮ್ಮ ರಾಯಚೂರು ಜಿಲ್ಲೆಯಲ್ಲಿ ಹುಟ್ಟಿರುವುದು ಅದೆಷ್ಟೋ ಅಂಧ-ಅನಾಥರ ಬಾಳಿಗೆ ಬೆಳಕಾಗಿದೆ. ನಾನು ನನ್ನದು ನನ್ನಿಂದಲೇ ಎನ್ನುವ ಈ ಸ್ವಾರ್ಥದ ಜಗತ್ತಿನಲ್ಲಿ ಸಿಂಧನೂರು ತಾಲೂಕಿನ ಹರೇಟನೂರು ಗ್ರಾಮದ ಬಡ ಜಂಗಮರಾದ ಚನ್ನಬಸಯ್ಯ ಸ್ವಾಮಿಯವರು ತಮ್ಮ ಜೋಳಿಗೆಯ ಮೂಲಕ ಮಾಡುತ್ತಿರುವ ಈ ಕಾರ್ಯ ಸಮಾಜದಲ್ಲಿ ಶ್ರೇಷ್ಠ ಕಾರ್ಯವಾಗಿದೆ.

ಈ ಸೇವಾ ಕಾರ್ಯಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ನಾನು ಹಾಗೂ ನಮ್ಮ ಪೊಲೀಸ್ ಇಲಾಖೆ ಇಂತಹ ಸೇವೆಗೆ ನಿರಂತರವಾಗಿ ಸಹಕರಿಸುತ್ತದೆ ಎಂದು ತಮ್ಮ ಭಾವನೆಗಳನ್ನು ಹಂಚಿಕೊಳ್ಳುವ ಮೂಲಕ ಕಾರುಣ್ಯ ಆಶ್ರಮದ ಸೇವೆಗೆ ಪ್ರೋತ್ಸಾಹಿಸಿದರು. ಈ ಸಂದರ್ಭದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಹರೇಟನೂರು. ಆಶ್ರಮದ ಸಿಬ್ಬಂದಿಗಳಾದ ಮರಿಯಪ್ಪ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಂಪುಟದಲ್ಲಿ ಬಳ್ಳಾರಿಯ ಶಾಸಕರಿಗೆ ನಿರಾಸೆ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ರಾಜ್ಯ ಕಾಂಗ್ರೆಸ್ ನೇತೃತ್ವದ ನೂತನ ಸರ್ಕಾರದ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಮತ್ತು 13 ಮಂದಿ ಹಿರಿಯ ನಾಯಕರು ಸಚಿವರಾಗಿ ಬುಧವಾರ ಪ್ರತಿಜ್ಞಾವಿಧಿ ಸ್ವೀಕರಿಸಿದರು. ಆದರೆ ಇದರಲ್ಲಿ ಬಳ್ಳಾರಿ ಜಿಲ್ಲೆಯ ಯಾರೊಬ್ಬರಿಗೂ ಸಚಿವ ಸ್ಥಾನ ಸಿಗಲಿಲ್ಲ.**

ಸಚಿವ ಸ್ಥಾನ ಪಡೆಯಲು ಜಿಲ್ಲೆಯ ನಾಲ್ವರು ಶಾಸಕರು ಪ್ರಯತ್ನ ನಡೆಸಿದ್ದರು. ಬಳ್ಳಾರಿ ಗ್ರಾಮಾಂತರ ಶಾಸಕ ಬಿ. ನಾಗೇಂದ್ರ, ಕಂಪ್ಲಿ ಶಾಸಕ ಜೆ.ಎನ್, ಗಣೇಶ್ ಪ್ರಬಲ ಆಕಾಂಕ್ಷಿಯಾಗಿದ್ದರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರೂ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದರು. ಸಂಸದ ಇ. ತುಕಾರಾಂ ತಮ್ಮ ಪತ್ನಿ ಅನ್ನಪೂರ್ಣ ಅವರಿಗೆ ಅವಕಾಶ ನೀಡಬೇಕು ಎಂದು ಹೈಕಮಾಂಡ್ ಮುಂದೆ ಕಸರತ್ತು ನಡೆಸಿದ್ದರು.




ಚಾರ್ಜ್‌ಶೀಟ್ ಕಂಟಕ: ವಾಲ್ಮೀಕಿ ಹಗರಣದಲ್ಲಿ ಸಿಲುಕಿ ಸಚಿವ ಸ್ಥಾನ ಕಳೆದುಕೊಂಡಿದ್ದ ಶಾಸಕ ಬಿ. ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ನೀಡುವುದಾಗಿ ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದರು. ಅದರಂತೆ ಸಚಿವ ಸ್ಥಾನ ಸಿಗಲೇಬೇಕು ಎಂದು ನಾಗೇಂದ್ರ ಅವರು ಹೈಕಮಾಂಡ್ ಮಟ್ಟದಲ್ಲಿ ಪ್ರಯತ್ನ ನಡೆಸಿದ್ದರು. ಆದರೆ, ಅದೇ ಹೊತ್ತಿಗೆ ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಸಿಬಿಐ ಮಂಗಳವಾರ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿತು.

ಇನ್ನೂ ಕಂಪ್ಲಿ ಶಾಸಕ ಜೆ ಎನ್ ಗಣೇಶ ಹೈಕಮಾಂಡ್ ಹಾಗೂ ಹಿರಿಯ ನಾಯಕರೊಂದಿಗೆ ಸಾಕಷ್ಟು ಮಾತುಕತೆ ನಡೆಸಿದ್ದರು, ವಾಲ್ಮೀಕಿ ಕೋಟಾದಲ್ಲಿ ಸಚಿವ ಸ್ಥಾನ ನೀಡುವಂತೆ ಕೋರಿದರು. ಅದರಲ್ಲೂ ಕಂಪ್ಲಿ ಕ್ಷೇತ್ರದ ಅವರ ಬೆಂಬಲಿಗರು ಹಾಗೂ ವಾಲ್ಮೀಕಿ ಮಹಾಸಭಾದ ನಾಯಕರು ಸುದ್ದಿಗೋಷ್ಠಿಗಳನ್ನು ನಡೆಸಿ ಸದಾ ಜನರ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸುತ್ತಿರುವ 24/7 ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಜೆ.ಎನ್. ಗಣೇಶ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಹೈಕಮಾಂಡ್ಗೆ ಒತ್ತಾಯಿಸಿದರು. ಡಿ.ಕೆ. ಶಿವಕುಮಾರ್ ಅವರ ಸಂಪುಟದ ಮೊದಲ ಹಂತದಲ್ಲಿ ಕೇವಲ ಹಿರಿಯ ಮತ್ತು ಪ್ರಭಾವಿ ನಾಯಕರಿಗೆ ಮಾತ್ರವೇ ಅವಕಾಶ ನೀಡಲಾಗಿದೆ. ರಾಜಕೀಯದ ಇತರೆಲ್ಲ ಸಮೀಕರಣಗಳನ್ನು ಗಮನದಲ್ಲಿಟ್ಟುಕೊಂಡು ಹೈಕಮಾಂಡ್ ಶೀಘ್ರದಲ್ಲೇ ಎರಡನೇ ಪಟ್ಟಿಯನ್ನು ಬಿಡುಗಡೆ ಮಾಡಲಿದ್ದು ಅದರಲ್ಲಿ ತಮಗೆ ಸಚಿವ ಸ್ಥಾನ ಸಿಗುವ ಸಾಧ್ಯತೆಗಳಿವೆ' ಎಂದು ಜಿಲ್ಲೆಯ ನಾಯಕರು ಹೇಳಿದ್ದಾರೆ.

**ಮುಂದಿನ ಸಂಪುಟ ವಿಸ್ತರಣೆಯಲ್ಲಿ ಹೈಕಮಾಂಡ್ ನನ್ನ ಹೆಸರನ್ನು ಸಚಿವ ಸ್ಥಾನಕ್ಕೆ ಪರಿಗಣಿಸುವ ವಿಶ್ವಾಸವಿದ್ದು ಎರಡನೇ ಪಟ್ಟಿಯಲ್ಲಿ ಸ್ಥಾನ ಸಿಗಲಿದೆ. ಜೆ. ಎನ್. ಗಣೇಶ, ಶಾಸಕ, ಕಂಪ್ಲಿ ವಿಧಾನಸಭಾ ಕ್ಷೇತ್ರ, ಕಂಪ್ಲಿ.**

# ವಿಶ್ವ ಪರಿಸರ ದಿನಾಚರಣೆ ಜೂನ್ 5- ಸಮಗ್ರ ಪ್ರಬಂಧ : ಲಾಜರ್ ಸಿರಿಲ್ ಜಿ

ನೈಜ್ಯ ದೆಸೆ ನ್ಯೂಸ್

"ಪ್ರಕೃತಿಯು ಮಾನವನ ಅಗತ್ಯಗಳನ್ನು ಪೂರೈಸಬಲ್ಲದೇ ಹೊರತು ಆತನ ದುರಾಶೆಯನ್ನಲ್ಲ" ಎಂಬ ಮಹಾತ್ಮಾ ಗಾಂಧೀಜಿಯವರ ಮಾತು ಇಂದಿನ ಪರಿಸ್ಥಿತಿಗೆ ಅತ್ಯಂತ ಪ್ರಸ್ತುತವಾಗಿದೆ. ನಾವು ಬದುಕುತ್ತಿರುವ ಈ ಸುಂದರ ಭೂಮಿ ಕೇವಲ ಮಾನವರಿಗಷ್ಟೇ ಅಲ್ಲ, ಕೋಟ್ಯಂತರ ಜೀವಸಂಕುಲಗಳಿಗೆ ಆಸರೆಯಾಗಿದೆ. ಆದರೆ ನಗರೀಕರಣ, ಕೈಗಾರಿಕೀಕರಣ ಮತ್ತು ಮಾನವನ ಮಿತಿಮೀರಿದ ಹಸ್ತಕ್ಷೇಪದಿಂದಾಗಿ ಪರಿಸರ ಇಂದು ತೀವ್ರವಾಗಿ ಕಲುಷಿತಗೊಳ್ಳುತ್ತಿದೆ. ಈ ಹಿನ್ನೆಲೆಯಲ್ಲಿ, ಪ್ರಕೃತಿಯನ್ನು ರಕ್ಷಿಸುವ ಮತ್ತು ಪರಿಸರ ಪ್ರಜ್ಞೆಯನ್ನು ಜಾಗೃತಗೊಳಿಸುವ ಉದ್ದೇಶದಿಂದ ಪ್ರತಿವರ್ಷ *ಜೂನ್ 5* ರಂದು *ವಿಶ್ವ ಪರಿಸರ ದಿನಾಚರಣೆ*ಯನ್ನು ಜಗತ್ತಿನಾದ್ಯಂತ ಆಚರಿಸಲಾಗುತ್ತದೆ.ಹಿನ್ನೆಲೆ ಮತ್ತು ಇತಿಹಾಸವಿಶ್ವ ಪರಿಸರ ದಿನಾಚರಣೆಯ ಇತಿಹಾಸವು 1972 ರಿಂದ ಆರಂಭವಾಗುತ್ತದೆ. ವಿಶ್ವಸಂಸ್ಥೆಯು (ಗಂ) ಸ್ವೀಡನ್‌ನ ಸ್ಟಾಕ್‌ಹೋಮ್‌ನಲ್ಲಿ ಜೂನ್ 5 ರಿಂದ ಜೂನ್ 16 ರವರೆಗೆ ಮಾನವ ಪರಿಸರ ಕುರಿತಾದ ಮೊದಲ ಜಾಗತಿಕ ಸಮ್ಮೇಳನವನ್ನು ಆಯೋಜಿಸಿತು. ಈ ಸಮ್ಮೇಳನದ ನೆನಪಿಗಾಗಿ, ಪ್ರತಿ ವರ್ಷ ಜೂನ್ 5 ಅನ್ನು ವಿಶ್ವ ಪರಿಸರ ದಿನವನ್ನಾಗಿ ಆಚರಿಸಲು ನಿರ್ಧರಿಸಲಾಯಿತು. ತದನಂತರ, 1974 ರಲ್ಲಿ "ಒಂದೇ ಒಂದು ಭೂಮಿ" (Only One Earth) ಎಂಬ ಘೋಷಣೆಯೊಂದಿಗೆ ಮೊದಲ ಬಾರಿಗೆ ಅಧಿಕೃತವಾಗಿ ವಿಶ್ವ ಪರಿಸರ ದಿನವನ್ನು ಆಚರಿಸಲಾಯಿತು. ಅಂದಿನಿಂದ ಇಂದಿನವರೆಗೆ ಪ್ರತಿ ವರ್ಷವೂ ಒಂದು ವಿಶಿಷ್ಟ ವಿಷಯ (Theme) ಮತ್ತು ಜಾಗತಿಕ ಆತಿಥೇಯ ದೇಶದೊಂದಿಗೆ ಇದನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಪ್ರಸ್ತುತ ವರ್ಷದ ಥೀಮ್ (ವಿಷಯ) ಮತ್ತು ಅದರ ಪ್ರಾಮುಖ್ಯತೆ ಪ್ರತಿ ವರ್ಷದಂತೆ ಈ ವರ್ಷವೂ ಸಹ ಪರಿಸರ ದಿನಾಚರಣೆಗೆ ಅತ್ಯಂತ ಪ್ರಸ್ತುತವಾದ ಮತ್ತು ಗಂಭೀರವಾದ ಥೀಮ್ ಅನ್ನು ಆಯೋಜಿಸಲಾಗಿದೆ. ಈ ವರ್ಷದ ಥೀಮ್:* "ಭೂಮಿಯ ಮರುಸ್ಥಾಪನೆ, ಮರುಭೂಮಿಕರಣ ಮತ್ತು ಬರಗಾಲದ ಸ್ಥಿತಿಸ್ಥಾಪಕತ್ವ" (Land Restoration, Desertification and Drought Resilience).** ಆತಿಥೇಯ ರಾಷ್ಟ್ರ:* ಈ ವರ್ಷದ ಜಾಗತಿಕ ಆಚರಣೆಯ ನೇತೃತ್ವವನ್ನು ಸೌದಿ ಅರೇಬಿಯಾ* ವಹಿಸಿಕೊಂಡಿದೆ.*ಥೀಮ್‌ನ ಆಳವಾದ ಅರ್ಥ:*ಪ್ರಸ್ತುತ ಜಗತ್ತು ಎದುರಿಸುತ್ತಿರುವ ಅತಿ ದೊಡ್ಡ ಸವಾಲುಗಳೆಂದರೆ ಭೂಮಿ ಬಂಜರಾಗುತ್ತಿರುವುದು, ಕಾಡುಗಳು ನಾಶವಾಗುತ್ತಿರುವುದು ಮತ್ತು ಜಾಗತಿಕ ತಾಪಮಾನದಿಂದಾಗಿ ಬರಗಾಲ ಆವರಿಸುತ್ತಿರುವುದು. ಈ ವರ್ಷದ ಥೀಮ್ ನಮಗೆ ಮೂರು ಮುಖ್ಯ ಸಂದೇಶಗಳನ್ನು ನೀಡುತ್ತದೆ: 1. ಭೂಮಿಯ ಮರುಸ್ಥಾಪನೆ (Land Restoration):* ಹಾನಿಗೊಳಗಾದ, ಸತ್ವ ಕಳೆದುಕೊಂಡ ಮಣ್ಣು ಮತ್ತು ಕಾಡುಗಳನ್ನು ಪುನಶ್ಚೇತನಗೊಳಿಸುವುದು.2. *ಮರುಭೂಮಿಕರಣ ತಡೆಗಟ್ಟುವುದು (Combating Desertification):* ಹಸಿರು ನಾಶವಾಗಿ ಇಡೀ ಭೂಭಾಗ ಮರುಭೂಮಿಯಾಗದಂತೆ ತಡೆಯುವುದು. 3. *ಬರಗಾಲದ ಸ್ಥಿತಿಸ್ಥಾಪಕತ್ವ (Drought Resilience):* ನೀರಿನ ಸದ್ಬಳಕೆ ಮತ್ತು ಮಳೆನೀರು ಕೊಯ್ಲಿನ ಮೂಲಕ ಭೀಕರ ಬರಗಾಲವನ್ನು ಸಮರ್ಥವಾಗಿ ಎದುರಿಸುವ ಶಕ್ತಿ ಬೆಳೆಸಿಕೊಳ್ಳುವುದು. ವಿಶೇಷ ಸೂಚನೆ:* "ನಾವು ಸಮಯವನ್ನು ಹಿಂದೆ ತಿರುಗಿಸಲು ಸಾಧ್ಯವಿಲ್ಲ, ಆದರೆ ನಾವು ಕಾಡುಗಳನ್ನು ಬೆಳೆಸಬಹುದು, ನೀರಿನ ಮೂಲಗಳನ್ನು ಉಳಿಸಬಹುದು ಮತ್ತು ಮಣ್ಣನ್ನು ಪುನಶ್ಚೇತನಗೊಳಿಸಬಹುದು. ನಾವು ಭೂಮಿಯ ತಲೆಮಾರಿನವರು (Generation Restoration)" ಎಂಬುದು ಇಂದಿನ ಕರೆ.ಪರಿಸರ ಮಾಲಿನ್ಯಕ್ಕೆ ಪ್ರಮುಖ ಕಾರಣಗಳು ಇಂದು ನಮ್ಮ ಪರಿಸರವು ಹಲವಾರು ರೀತಿಯ ಸವಾಲುಗಳನ್ನು ಎದುರಿಸುತ್ತಿದೆ. ಅವುಗಳಲ್ಲಿ ಪ್ರಮುಖವಾದವು: ಅರಣ್ಯ ನಾಶ (Deforestation):* ರಸ್ತೆಗಳು, ಕಟ್ಟಡಗಳು ಮತ್ತು ಕಾರ್ಖಾನೆಗಳ ನಿರ್ಮಾಣಕ್ಕಾಗಿ ಲಕ್ಷಾಂತರ ಮರಗಳನ್ನು ಕತ್ತರಿಸಲಾಗುತ್ತಿದೆ. ಇದು ವನ್ಯಜೀವಿಗಳ ಆವಾಸಸ್ಥಾನವನ್ನು ನಾಶಮಾಡುತ್ತಿರುವುದಲ್ಲದೆ, ಆಮ್ಲಜನಕದ ಕೊರತೆಗೂ ಕಾರಣವಾಗಿದೆ.ಪ್ಲಾಸ್ಟಿಕ್ ಮಾಲಿನ್ಯ:* ಒಮ್ಮೆ ಬಳಸಿ ಬಿಸಾಡುವ ಪ್ಲಾಸ್ಟಿಕ್ ಮಣ್ಣಿನಲ್ಲಿ ಕರಗದೆ ಜಲಮೂಲಗಳನ್ನು ಸೇರುತ್ತಿದೆ. ಇದರಿಂದ ಜಲಚರಗಳು ಸಾವನ್ನಪ್ಪುತ್ತಿವೆ ಮತ್ತು ಮಣ್ಣಿನ ಫಲವತ್ತತೆ ನಾಶವಾಗುತ್ತಿದೆ.ವಾಯು ಮತ್ತು ಜಲ ಮಾಲಿನ್ಯ:* ವಾಹನಗಳ ಹೊಗೆ ಮತ್ತು ಕಾರ್ಖಾನೆಗಳ ರಾಸಾಯನಿಕ ತ್ಯಾಜ್ಯಗಳು ಗಾಳಿ ಮತ್ತು ನೀರನ್ನು ವಿಷವಾಗಿಸುತ್ತಿವೆ. ಜಾಗತಿಕ ತಾಪಮಾನ (Global Warming):* ಹಸಿರುಮನೆ ಅನಿಲಗಳ ಬಿಡುಗಡೆಯಿಂದಾಗಿ ಭೂಮಿಯ ಉಷ್ಣಾಂಶ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ, ಇದು ಹವಾಮಾನ ವೈಪರೀತ್ಯಕ್ಕೆ ಕಾರಣವಾಗಿದೆ.ಪರಿಸರ ಸಂರಕ್ಷಣೆಯಲ್ಲಿ ನಮ್ಮ ಪಾತ್ರ (ಪರಿಹಾರಗಳು) ಕೇವಲ ಸರ್ಕಾರಗಳು ಅಥವಾ ಸ್ವಯಂಸೇವಾ ಸಂಸ್ಥೆಗಳು ಮಾತ್ರ ಪರಿಸರವನ್ನು ರಕ್ಷಿಸಲು ಸಾಧ್ಯವಿಲ್ಲ. ಪ್ರತಿಯೊಬ್ಬ ನಾಗರಿಕನೂ ಈ ಕೆಳಗಿನ ಜವಾಬ್ದಾರಿಗಳನ್ನು ಹೊರಬೇಕಾಗಿದೆ: ಕ್ರಮಗಳು ವಿವರಣೆ ಮರ ಬೆಳೆಸುವುದು* ಪ್ರತಿಯೊಬ್ಬರೂ ತಮ್ಮ ಜೀವಿತಾವಧಿಯಲ್ಲಿ ಕನಿಷ್ಠ ಹತ್ತು ಮರಗಳನ್ನಾದರೂ ನೆಟ್ಟು ಪೋಷಿಸಬೇಕು. 3ಖ ಸೂತ್ರದ ಬಳಕೆ* Reduce (ಬಳಕೆಯನ್ನು ಕಡಿಮೆ ಮಾಡಿ), Reuse (ಮರುಬಳಕೆ ಮಾಡಿ), Recycle (ಮರುಸಂಸ್ಕರಣೆ ಮಾಡಿ) ಎಂಬ ತತ್ವವನ್ನು ಪಾಲಿಸಬೇಕು. ನೀರಿನ ಉಳಿತಾಯ* ಹನಿ ನೀರನ್ನೂ ವ್ಯರ್ಥ ಮಾಡದೆ, ಮಳೆನೀರು ಕೊಯ್ಲು (Rainwater Harvesting) ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು.ಸಾವಯವ ಕೃಷಿ* ರಾಸಾಯನಿಕ ಗೊಬ್ಬರಗಳ ಬಳಕೆಯನ್ನು ಕಡಿಮೆ ಮಾಡಿ, ಮಣ್ಣಿನ ಆರೋಗ್ಯ ರಕ್ಷಿಸಲು ಸಾವಯವ ಕೃಷಿಗೆ ಆದ್ಯತೆ ನೀಡಬೇಕು. ಉಪಸಂಹಾರಪರಿಸರ ದಿನಾಚರಣೆ ಎನ್ನುವುದು ಕೇವಲ ಜೂನ್ 5 ರಂದು ಗಿಡ ನೆಟ್ಟು, ಫೋಟೋ ತೆಗೆಸಿಕೊಳ್ಳುವ ಒಂದು ದಿನದ ಆಚರಣೆಯಾಗಬಾರದು. ಅದು ನಮ್ಮ ದಿನನಿತ್ಯದ ಜೀವನದ ಭಾಗವಾಗಬೇಕು. ಪ್ರಕೃತಿ ಇಲ್ಲದೆ ಮಾನವನ ಅಸ್ತಿತ್ವ ಅಸಾಧ್ಯ ಎಂಬುದನ್ನು ನಾವು ಅರಿಯಬೇಕು. ಈ ವರ್ಷದ ಥೀಮ್‌ನಂತೆ, ನಮ್ಮ ಭೂಮಿಯನ್ನು ಮರುಭೂಮಿಯಾಗುವುದರಿಂದ ತಡೆದು, ಬರಗಾಲವನ್ನು ಎದುರಿಸುವ ಸಾಮರ್ಥ್ಯವನ್ನು ನಾವು ಬೆಳೆಸಿಕೊಳ್ಳಬೇಕಾಗಿದೆ. ನಮ್ಮ ಮುಂದಿನ ಪೀಳಿಗೆಗೆ ನಾವು ನೀಡಬಹುದಾದ ಅತ್ಯಂತ ಅಮೂಲ್ಯವಾದ ಆಸ್ತಿಯೆಂದರೆ ಅದು "ಸ್ವಚ್ಛ ಮತ್ತು ಹಸಿರು ಪರಿಸರ". ಬನ್ನಿ, ಇಂದೇ ಪಣ ತೊಡೋಣ - ಭೂಮಿಯನ್ನು ರಕ್ಷಿಸೋಣ, ಜೀವಸಂಕುಲವನ್ನು ಉಳಿಸೋಣ. "ಪರಿಸರವನ್ನು ಉಳಿಸಿ - ಪ್ರಾಣಿಕೋಟಿಯನ್ನು ರಕ್ಷಿಸಿ"



ಲಾಜರ್ ಸಿರಿಲ್ ಜಿ
ಪ್ರಾಚಾರ್ಯರು ಸನ್‌ರೈಸ್ ನರ್ಸಿಂಗ್ ಕಾಲೇಜ್ ಸಿಂಧನೂರು

## ನೇಮಕಾತಿ ಪ್ರಕಟಣೆ

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ನೇಮಕಾತಿ 2026: 3 ವಿಷಯ ತಜ್ಞರು, ಯುವ ವೃತ್ತಿಪರರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವು ಜೂನ್ 2026 ರ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಅಧಿಕೃತ ಅಧಿಸೂಚನೆಯ ಮೂಲಕ ವಿಷಯ ತಜ್ಞರು, ಯುವ ವೃತ್ತಿಪರರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರಿನಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು – ಕರ್ನಾಟಕ ಸರ್ಕಾರ ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 06–ಜೂನ್–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.ಅಧಿಕೃತ ವೆಬ್‌ಸೈಟ್: prcrdpr.karnataka.gov.in

## ವಿಶಾಖಪಟ್ಟಣಂ?ಮೆಹಬೂಬ್ ನಗರ ರೈಲ್ವೆಯನ್ನು ರಾಯಚೂರುವರೆಗೆ ವಿಸ್ತರಿಸಲು ಡಾ. ಬಾಬುರಾವ್ ಮನವಿ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಪ್ರತಿದಿನ ಸಂಚರಿಸುವ ವಿಶಾಖಪಟ್ಟಣಂ?ಮೆಹಬೂಬ್ ನಗರ ಎಕ್ಸ್‌ಪ್ರೆಸ್ ರೈಲು (ಸಂಖ್ಯೆ 12861/12862) ಸೇವೆಯನ್ನು ರಾಯಚೂರುವರೆಗೆ ವಿಸ್ತರಿಸುವಂತೆ ರೈಲ್ವೆ ಸಲಹಾ ಸಮಿತಿಯ ಮಾಜಿ ಸದಸ್ಯ ಡಾ. ಬಾಬುರಾವ್ ಅವರು ಸಿಕಂದರಾಬಾದ್ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಡಾ. ಆರ್. ಗೋಪಾಲಕೃಷ್ಣನ್ ಅವರಿಗೆ ಗುರುವಾರ ರಾಯಚೂರು ರೈಲ್ವೆ ನಿಲ್ದಾಣದಲ್ಲಿ ಮನವಿ ಸಲ್ಲಿಸಿದರು.**

ಮನವಿಯಲ್ಲಿ ತಿಳಿಸಿರುವಂತೆ, ಪ್ರಸ್ತುತ ಈ ರೈಲು ಮೆಹಬೂಬ್ ನಗರ ನಿಲ್ದಾಣದಲ್ಲಿ ಸುಮಾರು 6 ಗಂಟೆ 50 ನಿಮಿಷಗಳ ಕಾಲ ನಿಂತಿರುತ್ತದೆ. 2024ರ ಅಕ್ಟೋಬರ್ 17ರಂದು ರೈಲನ್ನು ರಾಯಚೂರುವರೆಗೆ ವಿಸ್ತರಿಸಲು ಅನುಮೋದನೆ ದೊರೆತಿದ್ದರೂ, ಈವರೆಗೂ ಆ ನಿರ್ಧಾರ ಜಾರಿಯಾಗಿಲ್ಲ ಎಂದು ಅವರು



ಗಮನಸೆಳೆದರು. ರೈಲು ಸೇವೆಯನ್ನು ರಾಯಚೂರುವರೆಗೆ ವಿಸ್ತರಿಸಿದರೆ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಸುಮಾರು ಮೂರು ಲಕ್ಷಕ್ಕೂ ಹೆಚ್ಚು ಜನರಿಗೆ ಅನುಕೂಲವಾಗಲಿದೆ. ಜೊತೆಗೆ ಆಂಧ್ರಪ್ರದೇಶ, ತೆಲಂಗಾಣ ಮತ್ತು ಕರ್ನಾಟಕದ ವಿವಿಧ ಭಾಗಗಳ ನಡುವೆ ಉತ್ತಮ ಸಂಪರ್ಕ ವ್ಯವಸ್ಥೆ ಕಲ್ಪಿಸುವ ಮೂಲಕ ಪ್ರಯಾಣಿಕರ ಸಂಚಾರ ಸುಗಮವಾಗಲಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದೇ ಸಂದರ್ಭದಲ್ಲಿ, ಅಮೃತ ಭಾರತ ರೈಲ್ವೆ ನಿಲ್ದಾಣ ಯೋಜನೆಯಡಿ ರಾಯಚೂರು ರೈಲ್ವೆ ನಿಲ್ದಾಣದಲ್ಲಿ ನಡೆಯುತ್ತಿರುವ ಕಾಮಗಾರಿಗಳಿಗೆ ವೇಗ ನೀಡಬೇಕು ಹಾಗೂ ನೂತನ ನಿಲ್ದಾಣ ಕಟ್ಟಡವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಲಾಯಿತು. ಅದರ ಜೊತೆಗೆ, ರಾಯಚೂರು?ಕಾಚೇಗುಡ್ಡ ರೈಲು (ಸಂಖ್ಯೆ 17694/67788) ಸಂಚಾರ ವೇಳಾಪಟ್ಟಿಯನ್ನು ಪರಿಷ್ಕರಿಸುವಂತೆ ಮನವಿ ಮಾಡಲಾಯಿತು. ಈ ರೈಲು ಬೆಳಿಗ್ಗೆ ರಾಯಚೂರಿನಿಂದ ಹೊರಟು ಸಂಜೆ ಮರಳುವಂತೆ ವೇಳೆಯನ್ನು ಬದಲಿಸಿದರೆ ಪ್ರಯಾಣಿಕರು ಒಂದೇ ದಿನದಲ್ಲಿ ತಮ್ಮ ವೈಯಕ್ತಿಕ ಹಾಗೂ ಕಚೇರಿ ಕೆಲಸಗಳನ್ನು ಮುಗಿಸಿಕೊಂಡು ಮರಳಲು ಅನುಕೂಲವಾಗುತ್ತದೆ ಎಂದು ತಿಳಿಸಲಾಯಿತು.

ರಾಯಚೂರು ರೈಲ್ವೆ ನಿಲ್ದಾಣದಲ್ಲಿ ಹೆಚ್ಚುತ್ತಿರುವ ಪ್ರಯಾಣಿಕರ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು 4 ಮತ್ತು 5ನೇ ಪ್ಲಾಟ್‌ಫಾರ್ಮ್‌ಗಳ ನಿರ್ಮಾಣ ಕಾರ್ಯವನ್ನು ಕೈಗೊಳ್ಳಬೇಕು. ಅಲ್ಲದೆ, ಪ್ರಯಾಣಿಕ ರೈಲುಗಳ ಪ್ರಾಥಮಿಕ ನಿರ್ವಹಣೆಗೆ ಅಗತ್ಯವಾದ ಪಿಟ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರಬೇಕು ಎಂಬ ಬೇಡಿಕೆಯನ್ನೂ ಮನವಿಯಲ್ಲಿ ಮಂಡಿಸಲಾಯಿತು. ಈ ಸಂದರ್ಭದಲ್ಲಿ ರೈಲ್ವೆ ಸಲಹಾ ಸಮಿತಿ ಸದಸ್ಯ ಮಾರೆಪ್ಪ, ಮಾಜಿ ಸದಸ್ಯ ಡಾ. ಬಾಬುರಾವ್ ಹಾಗೂ ಇತರ ಮುಖಂಡರು ಉಪಸ್ಥಿತರಿದ್ದರು. ರೈಲ್ವೆ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಜನಪರ ಬೇಡಿಕೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು, ಶೀಘ್ರ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಯಿತು.

## ಸಂವಿಧಾನದ ಪಠ್ಯ ಮೀರಿ ಪ್ರಮಾಣ ವಚನ : ಸಚಿವರಿಗೆ ವೇದಿಕೆಯಲ್ಲೇ ರಾಜ್ಯಪಾಲರ ಕಟ್ಟುನಿಟ್ಟಿನ ಸೂಚನೆ

**ನೈಜ್ಯ ದೆಸೆ ನ್ಯೂಸ್**

**ಬೆಂಗಳೂರು: ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಸಚಿವರು ನಿಗದಿತ ಸಾಂವಿಧಾನಿಕ ನಮೂನೆಯನ್ನು ಕೈಬಿಟ್ಟು, ತಮ್ಮ ಆರಾಧ್ಯ ದೈವಗಳು, ಗುರುಗಳು ಹಾಗೂ ನಾಯಕರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ್ದರಿಂದ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಮಧ್ಯಪ್ರವೇಶಿಸಿ 'ನಿಗದಿತ ನಮೂನೆಗೆ ಬದ್ಧರಾಗಿರಿ' ಎಂದು ಕಟ್ಟುನಿಟ್ಟಿನ ಸೂಚನೆ ನೀಡಬೇಕಾಯಿತು. ಅಧಿಕೃತ ಪಠ್ಯದಲ್ಲಿ ಇಲ್ಲದ ಪದಗಳನ್ನು ಸೇರಿಸಿ ಹೇಳಿದ್ದೇ ರಾಜ್ಯಪಾಲರ ಈ ಎಚ್ಚರಿಕೆಗೆ ಪ್ರಮುಖ ಕಾರಣವಾಯಿತು.**



ನೂತನ ಸರ್ಕಾರದ ಸಚಿವರ ಪ್ರಮಾಣ ವಚನ ಸ್ವೀಕಾರ ಸಮಾರಂಭವು ಹಲವು ಕುತೂಹಲಕಾರಿ ಘಟನೆಗಳಿಗೆ ಸಾಕ್ಷಿಯಾಯಿತು. ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸುವಾಗ ಸಂವಿಧಾನಬದ್ಧವಾಗಿ ಒದಗಿಸಲಾದ ನಿಗದಿತ ಪಠ್ಯವನ್ನು ಯಥಾವತ್ತಾಗಿ ಓದುವ ಬದಲು, ಕೆಲವು ನಾಯಕರು ತಮಗೆ ಇಷ್ಟವಾದ ಮಹನೀಯರ, ಗುರುಗಳ ಹಾಗೂ ನಾಯಕರ ಹೆಸರುಗಳನ್ನು ಸೇರಿಸಿದ್ದು ರಾಜ್ಯಪಾಲರ ಅಸಮಾಧಾನಕ್ಕೆ ಕಾರಣವಾಯಿತು. ಭಾರತದ ಸಂವಿಧಾನದ ನಿಯಮಗಳ ಪ್ರಕಾರ, ಯಾವುದೇ ಸಚಿವರು ಪ್ರಮಾಣ ವಚನ ಸ್ವೀಕರಿಸುವಾಗ ಕೇವಲ "ದೇವರ ಹೆಸರಿನಲ್ಲಿ" ಅಥವಾ "ಶ್ರದ್ಧಾಪೂರ್ವಕವಾಗಿ" ಎಂದು ಮಾತ್ರ ಹೇಳಬೇಕು. ಆದರೆ, ಈ ಸಮಾರಂಭದಲ್ಲಿ ಪ್ರಾರಂಭದಲ್ಲಿ ಬಂದ ಕೆಲವರು ಈ ನಿಯಮವನ್ನು ಉಲ್ಲಂಘಿಸಿ ತಮ್ಮ ಭಾವನೆಗಳಿಗೆ ತಕ್ಕಂತೆ ಪದಗಳನ್ನು ಸೇರಿಸಿದರು. ಡಿ.ಕೆ. ಶಿವಕುಮಾರ್ ಅವರು 'ಗಂಗಾಧರ ಅಜ್ಜಯ್ಯ'ನವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರೆ, ಕೆಲವರು ತಮ್ಮ ಆರಾಧ್ಯ ನಾಯಕರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಸಚಿವರು ಸಾಲುಸಾಲಾಗಿ ನಿಗದಿತ ನಮೂನೆಗಿಂತ ಹೊರತಾದ ಪದಗಳನ್ನು ಬಳಸುತ್ತಿರುವುದನ್ನು ಗಮನಿಸಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ತಕ್ಷಣ ಎಚ್ಚೆತ್ತುಕೊಂಡರು. ಪ್ರಮಾಣ ವಚನ ಪ್ರಕ್ರಿಯೆಯ ನಡುವೆಯೇ ಮಧ್ಯಪ್ರವೇಶಿಸಿದ ಅವರು, "ಮುಂದೆ ಬರುವ ಸಚಿವರು ಕಡ್ಡಾಯವಾಗಿ ನಿಮಗೆ ನೀಡಲಾಗಿರುವ ಮುದ್ರಿತ ಅಧಿಕೃತ ಪಠ್ಯವನ್ನು ಮಾತ್ರ ಓದಬೇಕು. ಅದರಲ್ಲಿ ಇಲ್ಲದ ಬೇರೆ ಯಾವುದೇ ಹೆಸರುಗಳನ್ನಾಗಲೀ, ಪದಗಳನ್ನಾಗಲೀ ಸೇರಿಸಬಾರದು" ಎಂದು ಸೂಚನೆ ನೀಡಿದರು. ಇದನ್ನು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಂದ ಹೇಳಿಸಿದರು. ರಾಜ್ಯಪಾಲರ ಈ ಕಟ್ಟುನಿಟ್ಟಿನ ಸೂಚನೆಯ ಬಳಿಕ ಎಚ್ಚೆತ್ತುಕೊಂಡ ಸಚಿವರಾದ ರಾಮಲಿಂಗಾರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ ಮತ್ತು ಪ್ರಿಯಾಂಕ್ ಖರ್ಗೆ ಮುಂತಾದವರು ಯಾವುದೇ ಹೆಚ್ಚುವರಿ ಹೆಸರುಗಳನ್ನು ಸೇರಿಸದೆ, ಸಂವಿಧಾನದ ನಿಯಮಾವಳಿಯಂತೆ ಕೇವಲ ನಿಗದಿತ ನಮೂನೆಗೆ ಬದ್ಧರಾಗಿ ಅತ್ಯಂತ ಶ್ರದ್ಧಾಪೂರ್ವಕವಾಗಿ ಪ್ರಮಾಣ ವಚನವನ್ನು ಸ್ವೀಕರಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## "ನರೇಗಾ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ಶಿಬಿರ"

**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ತಾಲೂಕಿನ ಕಪಗಲ್ ಗ್ರಾಮ ಪಂಚಾಯತಿಯ ಕಪಗಲ್ ಗ್ರಾಮದಲ್ಲಿ ನರೇಗಾ ಯೋಜನೆಯ ಕೂಲಿ ಕಾರ್ಮಿಕರ ಕೆಲಸದ ಸ್ಥಳದಲ್ಲಿ ಉಚಿತ ಆರೋಗ್ಯ ಶಿಬಿರ ಮಂಗಳವಾರ ಹಮ್ಮಿಕೊಳ್ಳಲಾಗಿತ್ತು.**

ಸದರಿ ಸಮಯದಲ್ಲಿ ಶ್ರೀಮತಿ ದೀಪಾ ಅರಳಿಕಟ್ಟಿ ಸಹಾಯಕ ನಿರ್ದೇಶಕರು ತಾಲ್ಲೂಕು ಪಂಚಾಯತ ಮಾನ್ವಿ ಇವರು ಮಾತನಾಡಿ ಆರೋಗ್ಯದ ಬಗ್ಗೆ ಹೆಚ್ಚು ಗಮನ ನೀಡಿ, ಕೆಲಸ ಮಾಡಲು ಆರೋಗ್ಯ ಮುಖ್ಯ ಅರೋಗ್ಯವಿಲ್ಲದೇ ಇದ್ದರೆ ಕೆಲಸ ಮಾಡಲು ಸಾಧ್ಯವಿಲ್ಲ, ಗ್ರಾಮೀಣ ಮಟ್ಟದಲ್ಲಿ ಉಪ ಕೇಂದ್ರಕ್ಕೆ ಹೋಗಿ ಆರೋಗ್ಯ ತಪಾಸಣೆ ಮಾಡಿಸುವುದಿಲ್ಲ, ಅದಕ್ಕಾಗಿ ಕಾಮಗಾರಿ ಸ್ಥಳದಲ್ಲಿ ಅರೋಗ್ಯ ತಪಾಸಣೆ ಮಾಡಲಾಗುತ್ತಿದೆ ಎಲ್ಲರೂ ಅರೋಗ್ಯ ತಪಾಸಣೆ ಮಾಡಲು ಸಲಹೆ ನೀಡಿದರು. ಕಪಗಲ್ ಗ್ರಾಮದ ಹನುಮಂತಿ ಸಮುದಾಯಿಕ ಆರೋಗ್ಯ ಕೇಂದ್ರ ಅಧಿಕಾರಿ ಹನುಮಂತಿ ಮತ್ತು ಪ್ರಾಥಮಿಕ ಸುರಕ್ಷ ಅಧಿಕಾರಿ ಶಿಲ್ಪಕಲಾ ನರೇಗಾ ಕೂಲಿಕಾರ್ಮಿಕರಿಗೆ ಬಿಪಿ, ಶುಗರ, ಅತಿಯಾದ





ಕೆಮ್ಮು ಇರುವ ಕಾರ್ಮಿಕರ ಗಂಟಲು ಕಫ ಪರೀಕ್ಷೆ ಮಾಡವುದರ ಜೊತೆಗೆ ಅವಶ್ಯಕತೆ ಇರುವ ಕಾರ್ಮಿಕರಿಗೆ ಜ್ವರ, ಕೆಮ್ಮು ಹಾಗೂ ಇನ್ನಿತರ ಸಣ್ಣಪುಟ್ಟ ಕಾಯಿಲೆಗಳಿಗೆ ಸ್ಥಳದಲ್ಲಿ ಮಾತ್ರೆ ನೀಡಿದರು.

ಶ್ರೀಮತಿ ಮಲ್ಲಮ್ಮ ಎಡಿಪಿಸಿ ಜಿಲ್ಲಾ ಪಂಚಾಯತ ರಾಯಚೂರು ರವರು ಮಾತನಾಡಿ ಮೇಟಿಗಳಿಗೆ ಸದರಿ ಸಂದರ್ಭದಲ್ಲಿ ಎನ್‌ಎಂಎಂಎಸ್ ತಂತ್ರಾಂಶದಲ್ಲಿ ಮುಖ ಚಹರೆ ಸಹಿತ ಕಡ್ಡಾಯವಾಗಿ ಎರಡು ಬಾರಿ ಹಾಜರಾತಿ ದಾಖಲಿಸಬೇಕು, ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತರಿ ಹಾಗೂ ಸ್ತ್ರೀ ಚೇತನ ಅಭಿಯಾನದಡಿ ಗಂಡು ಮತ್ತು ಹೆಣ್ಣಿಗೆ 370/–ರೂ ಸಮಾನ ಕೂಲಿ ಇದೆ ಅದರ ಪೂರ್ತಿ ಲಾಭ ಕಾರ್ಮಿಕರು ಪಡೆಯಬೇಕು ಎಂದರು.

ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆ ಬಗ್ಗೆ ಮಾಹಿತಿ ನೀಡಲಾಯಿತು. ಸಾಮಾಜಿಕ ಭದ್ರತೆ ಕಲ್ಪಿಸಲು ಯೋಜನೆಯಡಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರು ಹಾಗೂ ಗರ್ಭಿಣಿಯರಿಗೆ ಶೇಕಡಾ 50% ಕೆಲಸ ಮಾಡಿದರೂ ಪೂರ್ತಿ ಪ್ರಮಾಣದ ಕೂಲಿ ನೀಡಲಾಗುತ್ತದೆ. ತಾವು ನಿರ್ವಹಿಸುವ ಕೆಲಸದ ಅಧಾರದ ಮೇಲೆ ಕೂಲಿ ನೀಡಲಾಗುತ್ತದೆ. ಕೂಲಿ ಕಾರ್ಮಿಕರು ಎರಡು ಸಲ ಹಾಜರಾತಿ ಹಾಕಿದ ಮೇಲೆ ಮನೆಗೆ ಹೋಗಲು ತಿಳಿಸಿದರು.

ಸದರಿ ಸಂದರ್ಭದಲ್ಲಿ ಈರೇಶ ತಾಲ್ಲೂಕ ಐಇಸಿ ಸಂಯೋಜಕರು, ಚಿದಾನಂದ ತಾಲ್ಲೂಕ ತಾಂತ್ರಿಕ ಸಂಯೋಜಕರು, ಬಿಎಫ್ಟಿ ಸಿದ್ದರಾಮ, ಗ್ರಾಮದ ನರೇಗಾ ಕೂಲಿ ಕಾರ್ಮಿಕರು ಹಾಗೂ ಮೇಟಿಗಳು ಹಾಜರಿದ್ದರು.

## ಶಾಸಕ ಜೆ.ಎನ್.ಗಣೇಶಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯ

**ನೈಜ್ಯ ದೆಸೆ ನ್ಯೂಸ್**

**ಬಳ್ಳಾರಿ / ಕಂಪ್ಲಿ : ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳೊಂದಿಗೆ ಅಚ್ಚುಮೆಚ್ಚಿನ ನಾಯಕರಾಗಿರುವ ಶಾಸಕ ಜೆ.ಎನ್.ಗಣೇಶ ಇವರಿಗೆ ಕಾಂಗ್ರೆಸ್ ಹೈಕಮಾಂಡ್, ವರಿಷ್ಠರು ಮಂತ್ರಿ ಸ್ಥಾನ ನೀಡುವ ಮೂಲಕ ರಾಜ್ಯದ ಜನರ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕೆಂದು ಕಾಂಗ್ರೆಸ್ ಯುವ ಮುಖಂಡ ಸುಣಗಾರ ಕನಕಪ್ಪ ಒತ್ತಾಯಿಸಿದರು.**

ಅವರು ತಾಲೂಕಿನ ಎಮ್ಮಿಗನೂರು ಗ್ರಾಮದ ತೇರಿನ ಮನೆ ಬಳಿಯಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಂಪ್ಲಿ ಕ್ಷೇತ್ರದಲ್ಲಿ ಶಾಸಕರಾಗಿ ಗೆಲುವು ಸಾಧಿಸಿದಾಗಿನಿಂದಲೂ ಇಲ್ಲಿತನಕ




ಸಾಕಷ್ಟು ಅಭಿವೃದ್ಧಿ ಕಾರ್ಯದ ಜೊತೆಗೆ ಜನಪರ ಕೆಲಸ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷದ ಏಳಿಗೆ ಜೊತೆಗೆ ಪ್ರತಿಯೊಂದು ಹಂತದಲ್ಲಿ ಅಭಿವೃದ್ಧಿಯೇ ಮೊದಲ ಧ್ಯೇಯ ಎಂಬಂತೆ ಶ್ರಮಿಸಿದ್ದಾರೆ. ಕ್ಷೇತ್ರದ ಜನರ ಸಂಕಷ್ಟದಲ್ಲಿ ಭಾಗಿಯಾಗಿ ಸರ್ಕಾರದ ಸಾಕಷ್ಟು ಯೋಜನೆಗಳನ್ನು ಮನೆ ಬಾಗಿಲಿಗೆ ಮುಟ್ಟಿಸುವ ಕೆಲಸ ಮಾಡಿದ್ದಾರೆ. ಅಭಿವೃದ್ಧಿ ವಿಚಾರದಲ್ಲಿ ಶಾಸಕರು ಪ್ರತಿ ಹೆಜ್ಜೆಯಲ್ಲಿಯೂ ಮಾಡಿದ ಜನಪರ ಕಾರ್ಯಗಳು ರಾಜ್ಯಕ್ಕೆ ಮಾದರಿಯಾಗಿದ್ದು, ಸಣ್ಣವರಿಂದ ದೊಡ್ಡವರತನಕ ಮನೆ ಮಗನಾಗಿದ್ದಾರೆ. ಆದ್ದರಿಂದ ಕಾಂಗ್ರೆಸ್ ಹೈಕಮಾಂಡ್ ಮತ್ತು ವರಿಷ್ಠರು ಸಚಿವ ಸ್ಥಾನ ನೀಡಬೇಕು ಎಂದು ಒಕ್ಕೊರಲಿನಿಂದ ಒತ್ತಾಯಿಸಿದರು.

ಮುಖಂಡ ವಿ.ವಿರೇಶ ಮಾತನಾಡಿ, ರೈತರ ಮತ್ತು ಕ್ಷೇತ್ರದ ಜನರ ಮಹದಾಸೆಯೊಂದಿಗೆ ಶಾಸಕ ಗಣೇಶಗೆ ಸಚಿವ ಸ್ಥಾನ ನೀಡಬೇಕೆಂದರು. ಈ ಸಂದರ್ಭದಲ್ಲಿ ಮುಖಂಡರಾದ ಕಾಗೆ ಈರಣ್ಣ, ಡಿ.ಮುದಿಯಪ್ಪ, ಎಮ್ಮೆ ತಿಪ್ಪಯ್ಯ, ಹೊಸಮನೆ ರಾಜಸಾಬ್, ಜಯರಾಮ್ ರೆಡ್ಡಿ ಯಳ್ಳಾರ್ತಿ, ಕುರುಬರ ಶರಣಪ್ಪ, ಹೊಸಳ್ಳಿ ಜಡೇಶ, ಎಂ.ಜಡೆಪ್ಪ, ಬಾರಿಕರ್ ರಾಜ, ಅಲ್ಲಾಸ್, ಆಗಲೂರು ರಾಮ, ಎಂ.ಲಕ್ಷ್ಮೀಕಾಂತ, ಬಾರಿಕರ್ ನಾಗರೆಡ್ಡಿ ಸೇರಿದಂತೆ ಇತರರು ಇದ್ದರು.

## ಡಿ.ಕೆ ಶಿವಕುಮಾರ್ ಗೆ ಒಲಿದ ಮುಖ್ಯಮಂತ್ರಿ ಪದವಿ : ಅಭಿಮಾನಿಗಳ ಅಭಿಮಾನದ ಪರಿ ಹೇಗಿದೆ ನೋಡಿ

**ನೈಜ್ಯ ದೆಸೆ ನ್ಯೂಸ್**

**ಬೆಂಗಳೂರು:ಕರ್ನಾಟಕದನೂತನಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ನಿನ್ನೆ ಬುಧವಾರ ಲೋಕಭವನದಲ್ಲಿ ಸಚಿವ ಸಂಪುಟ ಸದಸ್ಯರೊಂದಿಗೆ ಪ್ರಮಾಣವಚನ ಸ್ವೀಕರಿಸಿದ್ದು ಅವರ ಅಭಿಮಾನಿಗಳಿಗೆ ದೀರ್ಘಕಾಲದಿಂದ ಕಂಡ ಕನಸು ನನಸಾದಂತಾಗಿತ್ತು.**

ಬೆಂಗಳೂರಿನ ರಾಜಭವನದಲ್ಲಿ ನಡೆದ ಸಮಾರಂಭದ ಸ್ಥಳ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಲು 2,000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್



ಕುಮಾರ್ ಸಿಂಗ್ ಅವರು ಸ್ವತಃ ಭದ್ರತಾ ವ್ಯವಸ್ಥೆಯ ಮೇಲ್ವಿಚಾರಣೆ ನಡೆಸಿ, ಅವರಿಗೆ ಮೂವರು ಜಂಟಿ ಪೊಲೀಸ್ ಆಯುಕ್ತರು ಹಾಗೂ 20 ಉಪ ಪೊಲೀಸ್ ಆಯುಕ್ತರು (ಡಿಸಿಪಿಗಳು) ಸಹಕಾರ ನೀಡಿದ್ದರು.

ಇದೇ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಡಿ ಕೆ ಶಿವಕುಮಾರ್ ಬೆಂಬಲಿಗರ ಸಂಭ್ರಮಾಚರಣೆಯಿಂದ ಬೆಂಗಳೂರಿನ ಹಲವು ಭಾಗಗಳಲ್ಲಿ ಹಬ್ಬದ ವಾತಾವರಣಕ್ಕೆ ಸಾಕ್ಷಿಯಾದವು. ನೂತನ ಮುಖ್ಯಮಂತ್ರಿಗೆ ಅಭಿನಂದನೆ ಸಲ್ಲಿಸುವ ಬೃಹತ್ ಬ್ಯಾನರ್‌ಗಳು, ಫ್ಲೆಕ್ಸ್‌ಗಳು ಹಾಗೂ ಕಟೌಟ್‌ಗಳು ನಗರದಾದ್ಯಂತ ಕಣ್ಣಿಗೆ ರಾಚುತ್ತಿದ್ದವು. ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸುಮನಹಳ್ಳಿಯಲ್ಲಿ ಪಕ್ಷದ ಕಾರ್ಯಕರ್ತರು 100 ಅಡಿ ಎತ್ತರದ ಡಿ.ಕೆ. ಶಿವಕುಮಾರ್ ಅವರ ಬೃಹತ್ ಕಟೌಟ್ ನ್ನು ಸ್ಥಾಪಿಸಿ ಸಂಭ್ರಮಿಸಿದ್ದಾರೆ.

ಡಿ.ಕೆ. ಶಿವಕುಮಾರ್ ಅವರ ಕಟ್ಟಾ ಅಭಿಮಾನಿಯಿಂದ ವಿಶಿಷ್ಟ ಅಭಿಮಾನ ಪ್ರದರ್ಶನ : ಕುಣಿಗಲ್ ವಿಧಾನಸಭಾ ಕ್ಷೇತ್ರದ ಹನುಮಾಪುರ ಗ್ರಾಮದ ನಿವಾಸಿ ಹಾಗೂ ಡಿ.ಕೆ. ಶಿವಕುಮಾರ್ ಅವರ ಕಟ್ಟಾ ಅಭಿಮಾನಿಯಾಗಿರುವ ಗಿರಿ ಗೌಡ ಅವರು ತಮ್ಮ ನಾಯಕನ ಮೇಲಿನ ಅಭಿಮಾನವನ್ನು ವಿಶಿಷ್ಟ ರೀತಿಯಲ್ಲಿ ವ್ಯಕ್ತಪಡಿಸಿದ್ದಾರೆ.

ಡಿ.ಕೆ. ಶಿವಕುಮಾರ್ ಅವರು ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ದಿನಾಂಕ ಮತ್ತು ಸಮಯವನ್ನು ತಮ್ಮ ಎರಡೂ ಕೈಗಳ ಮೇಲೆ ಟ್ಯಾಟೂ (ಹಚ್ಚೆ) ರೂಪದಲ್ಲಿ ಹಾಕಿಸಿಕೊಂಡಿದ್ದಾರೆ. ತಮ್ಮ ಬಹುಕಾಲದ ಕನಸು ನನಸಾಗುತ್ತಿರುವ ಸಂತಸದಲ್ಲಿ ಗಿರಿ ಗೌಡ ಶಿವಕುಮಾರ್ ಮುಖ್ಯಮಂತ್ರಿಯಾದ ಕ್ಷಣವನ್ನು ಜೀವನಪೂರ್ತಿ ನೆನಪಿನಲ್ಲಿ ಉಳಿಸಿಕೊಳ್ಳುವ ಉದ್ದೇಶದಿಂದ ಈ ಹಚ್ಚೆ ಹಾಕಿಸಿಕೊಂಡಿರುವುದಾಗಿ ತಿಳಿಸಿದ್ದಾರೆ.

# ಕನ್ನಡದ ಉಳಿವಿಗೆ ಎಲ್ಲರ ಜವಾಬ್ದಾರಿ: ಹಂಪಣ್ಣ

**ನೈಜ್ಯ ದೆಸೆ ನ್ಯೂಸ್**

**ನಗರದ ಅನಿಕೇತನ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 142ನೇ ಜಯಂತೋತ್ಸವ ಕಾರ್ಯಕ್ರಮವು ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಮಹತ್ವವನ್ನು ಸಾರುವ ವೇದಿಕೆಯಾಗಿತು. ಕಾರ್ಯಕ್ರಮವನ್ನು ಉದ್ಘಾಟಿಸಿದ ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ಜಿ. ಹಂಪಣ್ಣ ಅವರು ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರು ಕನ್ನಡ ನಾಡು–ನುಡಿ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು.**

ಕನ್ನಡ ಭಾಷೆಯ ಬೆಳವಣಿಗೆಗಾಗಿ ಶ್ರಮಿಸಿದ ಮಹಾನ್ ಆಡಳಿತಗಾರರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರು ಅಗ್ರಗಣ್ಯರು. ಶಿಕ್ಷಣ, ನೀರಾವರಿ, ಕೈಗಾರಿಕೆ, ಆರೋಗ್ಯ ಹಾಗೂ ಸಾಮಾಜಿಕ ಸುಧಾರಣೆಯ ಕ್ಷೇತ್ರಗಳಲ್ಲಿ ಅವರು ಕೈಗೊಂಡ ಕ್ರಮಗಳು ಇಂದಿಗೂ ಮಾದರಿಯಾಗಿವೆ.



ಕನ್ನಡ ಭಾಷೆಯಲ್ಲಿ ಶಿಕ್ಷಣಕ್ಕೆ ಉತ್ತೇಜನ ನೀಡಿದ ಅವರು, ಕನ್ನಡದ ಮೂಲಕವೇ ಜ್ಞಾನ ಮತ್ತು ಸಂಸ್ಕೃತಿಯ ಬೆಳವಣಿಗೆ ಸಾಧ್ಯವೆಂದು ನಂಬಿದ್ದರು. ಆದರೆ ಇಂದಿನ ಪರಿಸ್ಥಿತಿಯಲ್ಲಿ ಇಂಗ್ಲಿಷ್ ಭಾಷೆಯ ಪ್ರಭಾವ ಹೆಚ್ಚುತ್ತಿದ್ದು, ಕನ್ನಡ ಮಾಧ್ಯಮ ಶಾಲೆಗಳು ಮುಚ್ಚುವ ಸ್ಥಿತಿಗೆ ತಲುಪಿರುವುದು ಆತಂಕಕಾರಿ ಬೆಳವಣಿಗೆ ಎಂದು ಹಂಪಣ್ಣ ಕಳವಳ ವ್ಯಕ್ತಪಡಿಸಿದರು.

ಮುಖ್ಯ ಉಪನ್ಯಾಸ ನೀಡಿದ ಶ್ರೀಮತಿ ಶೋಭಾ ತೋರಗಲ್ ಅವರು ನಾಲ್ವಡಿ ಕೃಷ್ಣರಾಜ ಒಡೆಯರ ಸಾಧನೆಗಳನ್ನು ವಿವರಿಸುತ್ತಾ, ಮೈಸೂರು ರಾಜ್ಯವನ್ನು ಆಧುನಿಕತೆಯತ್ತ ಕೊಂಡೊಯ್ದ ದೂರದೃಷ್ಟಿಯ ನಾಯಕ ಎಂದು ಬಣ್ಣಿಸಿದರು. ವಿಶ್ವವಿದ್ಯಾನಿಲಯಗಳ ಸ್ಥಾಪನೆ, ಕೃಷ್ಣರಾಜ ಸಾಗರ ಅಣೆಕಟ್ಟು ನಿರ್ಮಾಣ, ಕೈಗಾರಿಕಾ ಅಭಿವೃದ್ಧಿ ಹಾಗೂ ಸಾಮಾಜಿಕ ಸಮಾನತೆಗೆ ಒತ್ತು ನೀಡಿದ ಆಡಳಿತದ ಮೂಲಕ ಅವರು ಜನಪ್ರಿಯರಾದರು ಎಂದು ಹೇಳಿದರು.

1915ರಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪನೆಯ ಮೂಲಕ ಕನ್ನಡ ಭಾಷೆ ಮತ್ತು ಸಾಹಿತ್ಯದ ಅಭಿವೃದ್ಧಿಗೆ ಭದ್ರ ಅಡಿಪಾಯ ಹಾಕಿದ ಅವರು, ಕನ್ನಡಿಗರಲ್ಲಿ ಭಾಷಾಭಿಮಾನ ಬೆಳೆಸುವ ಕಾರ್ಯಕ್ಕೆ ಚಾಲನೆ ನೀಡಿದರು. ಕೃಷಿ, ವ್ಯಾಪಾರ, ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಅವರ ಸುಧಾರಣಾತ್ಮಕ ಕ್ರಮಗಳು ರಾಜ್ಯದ ಸಮಗ್ರ ಅಭಿವೃದ್ಧಿಗೆ ಕಾರಣವಾದವು ಎಂದು ತಿಳಿಸಿದರು.

ಮಹಿಳಾ ಶಿಕ್ಷಣಕ್ಕೆ ವಿಶೇಷ ಆದ್ಯತೆ ನೀಡಿದ ನಾಲ್ವಡಿ ಕೃಷ್ಣರಾಜ ಒಡೆಯರು ಹೆಣ್ಣು ಮಕ್ಕಳಿಗೆ ಕಡ್ಡಾಯ ಪ್ರಾಥಮಿಕ ಶಿಕ್ಷಣ ವ್ಯವಸ್ಥೆ ಜಾರಿಗೊಳಿಸಿದರು. ದೇವದಾಸಿ ಪದ್ಧತಿ ನಿರ್ಮೂಲನೆ, ಮಹಿಳೆಯರಿಗೆ ಮತದಾನದ ಹಕ್ಕು, ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸೇರಿದಂತೆ ಹಲವು ಜನಪರ ಕ್ರಮಗಳ ಮೂಲಕ ಅವರು ಸಮಾಜಮುಖಿ ಆಡಳಿತಗಾರರಾಗಿ ಗುರುತಿಸಿಕೊಂಡಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಚ್. ಎಫ್. ಮಸ್ಕಿ ವಹಿಸಿದ್ದರು. ಡಿ. ಎಚ್. ಕಂಬಳಿ, ನಾಗರಾಜ ಮುಕ್ಕುಂದ, ಬಸವರಾಜ ಗಸ್ತಿ ಹಾಗೂ ರಾಮಣ್ಣ ಬಡಿಗೇರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಡಾ. ಬಸವರಾಜ ಪಿ. ನಾಯಕ ಕಾರ್ಯಕ್ರಮ ನಿರೂಪಿಸಿದರೆ, ಶ್ರೀಮತಿ ಶಾಂತಾ ವಳಗಿನಮನಿ ಸ್ವಾಗತಿಸಿ, ಡಾ. ಮರಿಲಿಂಗಪ್ಪ ವಂದಿಸಿದರು.

ಕಾರ್ಯಕ್ರಮವು ನಾಲ್ವಡಿ ಕೃಷ್ಣರಾಜ ಒಡೆಯರ ಆದರ್ಶಗಳು, ಕನ್ನಡದ ಮಹತ್ವ ಹಾಗೂ ಭಾಷಾ ಸಂರಕ್ಷಣೆಯ ಅಗತ್ಯತೆಯನ್ನು ಯುವಜನರಿಗೆ ಮನವರಿಕೆ ಮಾಡುವಲ್ಲಿ ಯಶಸ್ವಿಯಾಯಿತು. ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗಾಗಿ ಪ್ರತಿಯೊಬ್ಬ ಕನ್ನಡಿಗನು ತನ್ನ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂಬ ಸಂದೇಶ ಕಾರ್ಯಕ್ರಮದಲ್ಲಿ ಪ್ರತಿಧ್ವನಿಸಿತು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### BFA (Bachelor of Fine Art) ? ಬ್ಯಾಚುಲರ್ ಆಫ್ ಫೈನ್ ಆರ್ಟ್ಸ್ ಕೋರ್ಸ್ ಮಾಹಿತಿ ಃಈಂ ಎಂದರೇನು?

BFA ಎಂದರೆ Bachelor of Fine Art (ಲಲಿತಕಲಾ ಪದವಿ). ಇದು ಚಿತ್ರಕಲೆ, ಶಿಲ್ಪಕಲೆ, ವಿನ್ಯಾಸ, ಛಾಯಾಗ್ರಹಣ, ಅನಿಮೇಷನ್ ಮುಂತಾದ ಸೃಜನಾತ್ಮಕ ಕ್ಷೇತ್ರಗಳಲ್ಲಿ ತರಬೇತಿ ನೀಡುವ ಪದವಿ ಕೋರ್ಸ್.

ಅವಧಿ: ಸಾಮಾನ್ಯವಾಗಿ 3 ರಿಂದ 4 ವರ್ಷಗಳು (ವಿಶ್ವವಿದ್ಯಾಲಯದ ಪ್ರಕಾರ ಬದಲಾಗಬಹುದು)

ಅರ್ಹತೆ (Eligibility):

12ನೇ ತರಗತಿ (ಕಗಅ/12ಣು) ಉತ್ತೀರ್ಣ

ಯಾವುದೇ ವಿಭಾಗದಿಂದ (Arts, Science, Commerce) ಅರ್ಜಿ ಹಾಕಬಹುದು

ಕೆಲವು ಕಾಲೇಜುಗಳಲ್ಲಿ ಪ್ರವೇಶ ಪರೀಕ್ಷೆ ಅಥವಾ ಪೋರ್ಟ್‌ಫೋಲಿಯೊ/ಪ್ರಾಯೋಗಿಕ ಪರೀಕ್ಷೆ ಇರಬಹುದು

ಃಈಂಯ ಪ್ರಮುಖ ವಿಭಾಗಗಳು:

?? ಚಿತ್ರಕಲೆ (Painting)

?? ಡ್ರಾಯಿಂಗ್ ಮತ್ತು ಸ್ಕೆಚ್

?? ಶಿಲ್ಪಕಲೆ (Sculpture)

??? ಗ್ರಾಫಿಕ್ ಡಿಸೈನ್

?? ಫೋಟೋಗ್ರಫಿ

?? ಅನಿಮೇಷನ್ ಮತ್ತು ಮಲ್ಟಿಮೀಡಿಯಾ

?? ಅಪ್ಲೈಡ್ ಆರ್ಟ್ / ಡಿಸೈನ್

ಕಲಿಸುವ ವಿಷಯಗಳು:

ಕಲಾ ಇತಿಹಾಸ

ಬಣ್ಣಗಳ ಸಿದ್ಧಾಂತ

ರೇಖಾಚಿತ್ರ

ವಿನ್ಯಾಸ ತತ್ವಗಳು

ಡಿಜಿಟಲ್ ಆರ್ಟ್

ಸೃಜನಾತ್ಮಕ ಪ್ರಾಜೆಕ್ಟ್‌ಗಳು

ಉದ್ಯೋಗ ಅವಕಾಶಗಳು:

ಕಲಾವಿದ (Artist)

ಗ್ರಾಫಿಕ್ ಡಿಸೈನರ್

ಅನಿಮೇಟರ್

ಆರ್ಟ್ ಡೈರೆಕ್ಟರ್

ಫೋಟೋಗ್ರಾಫರ್

ಗಖ/ಗಘ ಡಿಸೈನರ್

ಶಿಕ್ಷಕ / ಉಪನ್ಯಾಸಕ

ಫ್ರೀಲಾನ್ಸ್ ಡಿಸೈನರ್

ಉನ್ನತ ಶಿಕ್ಷಣ:

ಒಈಂ (Master of Fine Arts)

ಡಿಸೈನ್ ಕೋರ್ಸ್‌ಗಳು

ಅನಿಮೇಷನ್ / ಮಲ್ಟಿಮೀಡಿಯಾ ಕೋರ್ಸ್‌ಗಳು

ಸಂಬಳ: ಆರಂಭದಲ್ಲಿ ಸುಮಾರು ?15,000??40,000/ ತಿಂಗಳು (ಕ್ಷೇತ್ರ, ಕೌಶಲ್ಯ ಮತ್ತು ಅನುಭವದ ಮೇಲೆ ಅವಲಂಬಿತ). ಅನುಭವದೊಂದಿಗೆ ಹೆಚ್ಚಾಗಬಹುದು.

## ಎರಡನೇ ಪಟ್ಟಿಯಲ್ಲಿ ಅವಕಾಶ ಸಿಗುವ ವಿಶ್ವಾಸವಿದೆ ; ಸಂತೋಷ್ ಲಾಡ್

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ರಾಜ್ಯದಲ್ಲಿ ರಚನೆಯಾಗಿರುವ ಹೊಸ ಸರ್ಕಾರದಲ್ಲಿ ಸಚಿವ ಸ್ಥಾನ ಕೈತಪ್ಪಿದ ಕುರಿತು ಪ್ರತಿಕ್ರಿಯಿಸಿರುವ ಸಂತೋಷ್ ಲಾಡ್ ಅವರು, ಯಾವುದೇ ಅತೃಪ್ತಿ ವ್ಯಕ್ತಪಡಿಸದೆ, "ಇದು ಜೀವನದ ಒಂದು ಭಾಗ" ಎಂದು ತಮ್ಮ ನಿಲುವನ್ನು ಸ್ಪಷ್ಟಪಡಿಸಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿದ ಸಂತೋಷ್ ಲಾಡ್ , ಸಂಪುಟದ ಮೊದಲ ಪಟ್ಟಿಯಲ್ಲಿ ಅವಕಾಶ ಸಿಗದಿದ್ದರೂ, ಎರಡನೇ ಪಟ್ಟಿಯಲ್ಲಿ ತಮಗೆ ಸಚಿವ ಸ್ಥಾನ ಸಿಗಲಿದೆ ಎಂಬ ಬಲವಾದ ವಿಶ್ವಾಸ ವ್ಯಕ್ತಪಡಿಸಿದ್ದಾರೆ, ಪಕ್ಷದಲ್ಲಿ ಪ್ರತಿಯೊಬ್ಬರೂ ಅವಕಾಶಕ್ಕಾಗಿ ಪ್ರಯತ್ನಿಸುವುದು ಸಹಜ, ತಾನೂ ಕೂಡ ಆ ಸಾಲಿನಲ್ಲಿ ಇದ್ದೇನೆ ಎಂದು ತಿಳಿಸಿದ್ದಾರೆ. 2028ರ ಗುರಿ ಮುಂದಿನ ದಿನಗಳಲ್ಲಿ ಹಿರಿಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಮತ್ತು ಪರಮೇಶ್ವರ್ ಅವರ ಮಾರ್ಗದರ್ಶನದಲ್ಲಿ ಪಕ್ಷವನ್ನು ಬಲಪಡಿಸುವುದೇ ನಮ್ಮ ಮುಂದಿನ ಗುರಿ. 2028ರ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಲು ನಾವೆಲ್ಲರೂ ಒಗ್ಗಟ್ಟಾಗಿ ಶ್ರಮಿಸುತ್ತೇವೆ ಎಂದು ಸಂತೋಷ್ ಲಾಡ್ ಈ ಸಂದರ್ಭದಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.




## ಕಾರಟಗಿಯಲ್ಲಿ ಕೆಆರ್‌ಎಸ್ ಪಕ್ಷದ ಲಂಚಮುಕ್ತ ಅಭಿಯಾನ. ಪೊಲೀಸ್ ಠಾಣೆ ಹಾಗೂ ಪುರಸಭೆಗೆ ಮನವಿ ಸಲ್ಲಿಕೆ.

ನೈಜ್ಯ ದೆಸೆ ನ್ಯೂಸ್

ಕೊಪ್ಪಳ ಜಿಲ್ಲೆ ಕಾರಟಗಿ ತಾಲೂಕಿನ ಪೊಲೀಸ್ ಠಾಣೆ ಮತ್ತು ಪುರಸಭೆಯಲ್ಲಿ ಇಂದು ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ವತಿಯಿಂದ "ಲಂಚಮುಕ್ತ ಕರ್ನಾಟಕ" ಅಭಿಯಾನವನ್ನು ಹಮ್ಮಿಕೊಳ್ಳಲಾಯಿತು. ಸಾರ್ವಜನಿಕರಿಗೆ ಸರ್ಕಾರಿ ಕಚೇರಿಗಳಲ್ಲಿ ಯಾವುದೇ ಕೆಲಸಕ್ಕಾಗಿ ಲಂಚ ನೀಡುವ ಅಥ–'ವಾ ಪಡೆಯುವ ಪರಿಸ್ಥಿತಿ ನಿರ್ಮಾಣವಾಗಬಾರದು. ಸರ್ಕಾರಿ ಸೇವೆಗಳು ಪಾರದರ್ಶಕವಾಗಿ ಮತ್ತು ಸಮಯಕ್ಕೆ ಸರಿಯಾಗಿ ದೊರೆಯಬೇಕು ಎಂಬ ಉದ್ದೇಶದಿಂದ ಕೆಆರ್‌ಎಸ್ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಪೊಲೀಸ್ ಠಾಣೆ ಮತ್ತು ಪುರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆ ಆರ್ ಎಸ್ ಪಕ್ಷದ ಯುವ ಮುಖಂಡ ನಿರುಪಾದಿ ಕೆ ಗೊಮರ್ಸಿ ಅವರು ಸರ್ಕಾರದ ವಿವಿಧ



ಇಲಾಖೆಗಳಲ್ಲಿನ ಭ್ರಷ್ಟಾಚಾರ ಮತ್ತು ಲಂಚದ ಹಾವಳಿಯಿಂದ ಸಾಮಾನ್ಯ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. ಜನಸಾಮಾನ್ಯರ ಹಕ್ಕಿನ ಸೇವೆಗಳನ್ನು ಪಡೆಯಲು ಅನಗತ್ಯ ವಿಳಂಬ ಹಾಗೂ ಹಣದ ಬೇಡಿಕೆಗಳು ಕಂಡುಬರುತ್ತಿವೆ.ಇಂತಹ ದುಷ್ಪ್ರವೃತ್ತಿಗಳನ್ನು ತಡೆಯಲು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಪೊಲೀಸ್ ಠಾಣೆಯಲ್ಲಿ ದೂರುಗಳ ಸ್ವೀಕಾರ, ತನಿಖೆ ಹಾಗೂ ಸಾರ್ವಜನಿಕರೊಂದಿಗೆ ನಡೆದುಕೊಳ್ಳುವ ವಿಚಾರದಲ್ಲಿ ಪಾರದರ್ಶಕತೆ ಕಾಪಾಡಬೇಕು. ಪುರಸಭೆಯಲ್ಲಿ ತೆರಿಗೆ, ಖಾತೆ, ಪರವಾನಗಿ, ಕುಡಿಯುವ ನೀರು ಹಾಗೂ ಇತರೆ ನಾಗರಿಕ ಸೇವೆಗಳನ್ನು ಯಾವುದೇ ಲಂಚವಿಲ್ಲದೆ ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು ಹಾಗೂ ಕೆಆರ್‌ಎಸ್ ಪಕ್ಷವು ರಾಜ್ಯಾದ್ಯಂತ ಲಂಚಮುಕ್ತ ಅಭಿಯಾನವನ್ನು ಮುಂದುವರಿಸಲಿದ್ದು, ಭ್ರಷ್ಟಾಚಾರದ ವಿರುದ್ಧ ಜನಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೆಆರ್‌ಎಸ್ ಪಕ್ಷದ ರಾಜ್ಯ ರೈತ ಘಟಕದ ಕಾರ್ಯದರ್ಶಿ ಕನಕಪ್ಪ ಉಡೆಜಾಲಿ ಕೊಪ್ಪಳ ಜಿಲ್ಲಾ ಸಂಚಾಲಕರಾದ ಗಣೇಶ್ ಅಮೃತ್, ಉಮೇಶ್ ಕುಮಾರ್ ಸಾರಂಗಿ, ಮೈನುದ್ದೀನ್, ಶಾಮಿದ ಅಲಿ ಹುಲಿ ಹೈದರ್,ಹನುಮಂತಪ್ಪ , ಹನುಮೇಶ್, ಅಮಾಂತಪ್ಪ ಜೂಲ್ ಕುಂಟೆ, ಸೇರಿದಂತೆ ಸ್ಥಳೀಯ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

## ಸಾರಿಗೆ ಘಟಕಕ್ಕೆ ವಿಭಾಗೀಯ ನಿಯಂತ್ರಾಧಿಕಾರಿ ಬಿರಾದಾರ ಭೇಟಿ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ರಸ್ತೆ ಸಾರಿಗೆ ನಿಗಮದಲ್ಲಿ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರು ಇನ್ನೂ ಹೆಚ್ಚಿಗೆ ಶ್ರಮವಹಿಸಿ ಕೆಲಸ ಮಾಡಿ ನಿಗಮಕ್ಕೆ ಹೆಚ್ಚಿನ ಆದಾಯ ತರಲು ಪ್ರಯತ್ನಿಸಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಜಯಪುರ ವಿಭಾಗೀಯ ನಿಯಂತ್ರಣಾಧಿಕಾರಿ ದೇವಾನಂದ ಎ. ಬಿರಾದಾರ ಹೇಳಿದರು.

ವಿಭಾಗದ ಜವಾಬ್ದಾರಿ ವಹಿಸಿಕೊಂಡ ನಂತರ ಗುರುವಾರ ಸ್ಥಳೀಯ ಸಾರಿಗೆ ಘಟಕಕ್ಕೆ



ಭೇಟಿ ನೀಡಿದ ಸಂದರ್ಭದಲ್ಲಿ ಘಟಕದ ವತಿಯಿಂದ ಆಯೋಜಿಸಿದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಘಟಕ ವ್ಯವಸ್ಥಾಪಕ ಪಿ.ಕೆ. ಜಾಧವ ಅವರು ಮಾತನಾಡಿ ನಮ್ಮ ಡಿಸಿ ಸಾಹೇಬರ ಸಲಹೆಯಂತೆ ನಾವೆಲ್ಲರೂ ಶಕ್ತಿಮೀರಿ ಶ್ರಮವಹಿಸಿ ನಿಗಮಕ್ಕೆ ಒಳ್ಳೆಯ ಆದಾಯ ತರಲು ಪ್ರಯತ್ನಿಸುತ್ತೇವೆ ಇದರ ಜೊತೆಗೆ ಘಟಕದಲ್ಲಿ ಸಿಬ್ಬಂದಿಗಳ ಕೊರತೆ ಇದೆ ಇನ್ನು ಕನಿಷ್ಠ ಹತ್ತು ಚಾಲಕರು ಹಾಗೂ ನಿರ್ವಾಹಕರ ಅಗತ್ಯವಿದೆ ಈ ಎಲ್ಲ ಸೌಲತ್ತುಗಳನ್ನೂ ಮಾಡಿಕೊಡಬೇಕೆಂದು ಅವರಲ್ಲಿ ವಿನಂತಿಸುತ್ತೇನೆ ಎಂದರು. ಇದೇ ಸಂದರ್ಭದಲ್ಲಿ ಘಟಕ ಹಾಗೂ ಘಟಕದ ಎಲ್ಲ ಯೂನಿಯನ್ ಗಳ ವತಿಯಿಂದ ನೂತನ ವಿಭಾಗೀಯ ನಿಯಂತ್ರಣಾಧಿಕಾ–ರಿಗಳಾದ ದೇವಾನಂದ ಬಿರಾದಾರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಿಬ್ಬಂದಿ ಮೇಲ್ವಿಚಾರಕ ಬಿ.ಬಿ.ಚೊಕಾವಿ, ಸಂಚಾರಿ ನಿರೀಕ್ಷಕರಾದ ನಿಂಗನಗೌಡ, ಎಸ್.ಪಿ.ಆಲ್ಯಾಳ,

ನೌಕರ ಸಂಘದ ಅಧ್ಯಕ್ಷ ಕುಮಾರ ಅಸ್ಕಿ,ಪಾರು ಪತ್ತೆದಾರರಾದ ಜಿ.ಜಿ.ಬಿರಾದಾರ,–ಎಸ್.ಬಿ.ಅಸ್ಕಿ,ಎಂ.ಎಂ.ಜಾಲವಾದಿ,ಕೆ.ಕೆ.ಗಣಾಚಾರಿ, ಯೂನಿಯನ್ ಅಧ್ಯಕ್ಷರು, ಪದಾಧಿಕಾ–ರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

# "ಆಮೆಗತಿಯ ರಸ್ತೆ ಕಾಮಗಾರಿಯಿಂದ ಸವಾರರ ಪರದಾಟ"

ನೈಜ್ಯ ದೆಸೆ ನ್ಯೂಸ್

ಸಿರವಾರ : ಹುನುಗುಂದ ರಾಯಚೂರು ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಪಟ್ಟಣದ ಮುಖ್ಯ ರಸ್ತೆಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಕ್ರಾಸ್‌ನಿಂದ ಸಂಗಪ್ಪ ಕಾಲುವೆವರೆಗೆ ಕೈಗೊಂಡಿರುವ ರಸ್ತೆ ನಿರ್ಮಾಣ ಮತ್ತು ಜಲಜೀವನ್ ಮಿಷನ್ ಕುಡಿಯುವ ನೀರಿನ ಪೈಪ್ ಲೈನ್ ಆಳವಡಿಕೆ ಕಾಮಗಾರಿ ಕೆಲಸ ತೀರಾ ವಿಳಂಬವಾಗಿ ಮಾಡುತ್ತಿರುವುದು ಸ್ಥಳೀಯ ವರ್ತಕರು, ವಾಹನ ಸವಾರರು, ಸಾರ್ವಜನಿಕ–ರಿಗೆ ತೀವ್ರ ತೊಂದರೆಯುಂಟು ಮಾಡಿದೆ.

ರಸ್ತೆ ಅಭಿವೃದ್ಧಿ ಕಾಮಗಾರಿಯಿಂದ ರಸ್ತೆಯಲ್ಲ ಧೂಳು ಮಯವಾಗಿ ಕಣ್ಣು ಹಾಗೂ ದೈಹಿಕ ಆರೋಗ್ಯ ಸಮಸ್ಯೆಗಳಿಗೆ ಕಾರಣಗಿದೆ. ಇನ್ನೂ ರಸ್ತೆಯುದ್ದಕ್ಕೂ ಅಗೆಯಲಾಗಿರುವ ಗುಂಡಿಗಳಲ್ಲಿ ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಮಳೆಯ ನೀರು ತುಂಬಿ ಸಂಪೂರ್ಣವಾಗಿ



ಜಲಾವೃತಗೊಂಡಿವೆ. ಮಣ್ಣು ಮಿಶ್ರಿತ ನೀರು ಹಾಗೂ ಕೇಸರು ರಸ್ತೆಯಲ್ಲಿ ಹರಡಿದ್ದು ವಾಹನ ಸವಾರರು ಸಂಚರಿಸಲು ಜನರು ಹರಸಾಹಸ ಪಡುವಂತಾಗಿದ್ದು, ದ್ವಿಚಕ್ರ ವಾಹನ ಸವಾರರು ಗುಂಡಿಗಳ ಆಳ ತಿಳಿಯದೆ ಆಯಾ ತಪ್ಪಿ ಬಿದ್ದು ಗಾಯ ಮಾಡಿಕೊಂಡ ಘಟನೆಗಳು ಜರುಗಿವೆ. ಭೀಕರ



ಅಪಾಯ ಸಂಭವಿಸುವ ಮುನ್ನ ಬೇಗನೆ ಕಾಮಗಾರಿ ಮುಗಿಸಲು ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ರಸ್ತೆ ಅಗೆದ ಪರಿಣಾಮ ತಮ್ಮ ಅಂಗಡಿಗಳ ಮುಂಭಾಗದಲ್ಲಿ ದೊಡ್ಡ ಗುಂಡಿಗಳು ಬಿದ್ದಿದ್ದು, ಗ್ರಾಹಕರು ಅಂಗಡಿಗೆ ಪ್ರವೇಶಿಸಲು ಸಾಧ್ಯವಾಗುತ್ತಿಲ್ಲ. ಅಂಗಡಿ ಮುಂಭಾಗ ಕೆಸರು ಮತ್ತು ನೀರು ನಿಂತಿರುವುದರಿಂದ ಗ್ರಾಹಕರು ಅಂಗಡಿಗಳತ್ತ ಬರಲು ಹಿಂದೇಟು ಹಾಕುತ್ತಿದ್ದಾರೆ. ಇದರಿಂದಾಗಿ ದೈನಂದಿನ ವ್ಯಾಪಾರ ವಹಿವಾಟಿಗೆ ತೀವ್ರ ಹೊಡೆತ ಬಿದ್ದಿದೆ ಎಂದು ಅಳಲು ತೋಡಿಕೊಂಡಿದ್ದಾರೆ.

ರಸ್ತೆ ಕಾಮಗಾರಿಯನ್ನು ಪ್ರಾರಂಭಿಸಿದವರು ಅದನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕಿತ್ತು. ಮಳೆಗಾಲ ಆರಂಭವಾಗುವ ಮುನ್ನವೇ ಎಚ್ಚೆತ್ತುಕೊಳ್ಳಬೇಕಿದ್ದ ಗುತ್ತಿಗೆದಾರರು ಮತ್ತು ಸ್ಥಳೀಯ ಆಡಳಿತ ಮಂಡಳಿ ಕೇವಲ ಗುಂಡಿಗಳನ್ನು ಆಗೆದು ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ತಕ್ಷಣವೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಬಾಕಿ ಉಳಿದಿರುವ ಕಾಮಗಾ–ರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಸದ್ಯ ಉಂಟಾಗಿರುವ ರಸ್ತೆ ಅವ್ಯವಸ್ಥೆಯನ್ನು ಸರಿಪಡಿಸಬೇಕು ಎಂದು ಸಾರ್ವಜನಿಕರು ಹಾಗೂ ವರ್ತಕರು ಒತ್ತಾಯಿಸಿದ್ದಾರೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.